ಸಂಪುಟ : 9 ಸಂಚಿಕೆ 65 ಪುಟ : 4 ಬೆಲೆ: 3.00 ಶುಕ್ರವಾರ ಎಪ್ರಿಲ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 65 Pages : 4 Price : 3.00 Friday April 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ ಸಂಬಂಧ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲುಸ್ತುವಾರಿ ಸಮಿತಿಯಿಂದ (ಎಂಸಿಎಂಸಿ) ವಿವಿಧ ಮಾಧ್ಯಮಗಳಲ್ಲಿ ದಿನನಿತ್ಯ ಪ್ರಸಾರವಾಗುವ ರಾಜಕೀಯ ಜಾಹೀರಾತುಗಳ ಬಗ್ಗೆ ನಿಗಾ ವಹಿಸಲಾಗಿದೆ.

ವಿದ್ಯುನ್ಮಾನ ಮಾಧ್ಯಮ ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಎಂಸಿಎಂಸಿ ಸಮಿತಿಯ ಅನುಮತಿಯಿಲ್ಲದೆ ಚುನಾವಣಾ ರಾಜಕೀಯ ಜಾಹೀರಾತು ಪ್ರಕಟಿಸುವಂತಿಲ್ಲ. ಎಂಸಿಎಂಸಿ ಸಮಿತಿಯ ಪೂರ್ವಾನುಮತಿ ಪಡೆದೇ ರಾಜಕೀಯ ಜಾಹೀರಾತು ಪ್ರಕಟಿಸಬೇಕು.

ವಿದ್ಯುನ್ಮಾನ ಮಾಧ್ಯಮ(ಎಲೆಕ್ಟ್ರಾನಿಕ್)ಗಳಾದ ಟಿ.ವಿ, ರೇಡಿಯೋ, ಮೊಬೈಲ್ ಸಂದೇಶ, ಧ್ವನಿ ಮುದ್ರಿತ ಸಂದೇಶಗಳು, ಬಲ್ಕ್ ಎಸ್ಎಂಎಸ್ ಹಾಗೂ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಎಕ್ಸ್, ಇನ್ಸ್ಟಾಗ್ರಾಂಗಳಲ್ಲಿ ಪ್ರಚಾರ ಕೈಗೊಳ್ಳುವವರು ಎಂಸಿಎಂಸಿ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ.

ಪತ್ರಿಕೆಗಳಲ್ಲಿ ಜಾಹೀರಾತು ಪ್ರಕಟಣೆಗೆ ಮತದಾನ ಹಾಗೂ ಮತದಾನದ 48 ಗಂಟೆಗಳ ಮೊದಲು ಮೇ. 5ರ ಸಂಜೆ 6 ಗಂಟೆಯಿಂದ ಮತದಾನದ ದಿನ ಮೇ 7ರಂದು ರಾಜಕೀಯ ಜಾಹೀರಾತು ಪ್ರಕಟಣೆಗೆ ಪೂರ್ವಾನುಮತಿ ಕಡ್ಡಾಯವಾಗಿದೆ.

ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಜಾಹೀರಾತು ಪ್ರಕಟಣೆಗೆ ಅನುಮತಿ ಪಡೆಯಲು ನಿಗದಿತ ನಮೂನೆಗಳಲ್ಲಿ ಎಂಸಿಎಂಸಿ ಸಮಿತಿಗೆ ಅರ್ಜಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಎಂಸಿಎಂಸಿ ಸಮಿತಿಯ ಅಧ್ಯಕ್ಷರಾದ ವೈಶಾಲಿ ಎಂ.ಎಲ್ ಅವರು ತಿಳಿಸಿದ್ದಾರೆ.

### ರೋಣ ವಿಧಾನಸಭಾ ಕ್ಷೇತ್ರದ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿದ ಬಸವರಾಜ ಬೊಮ್ಮಾಯಿ

## ಮೋದಿಯವರಿಗೆ ಸಮಾನಾದ ನಾಯಕರಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ/ರೋಣ

ಭಾರತ ಬದಲಾಗುತ್ತಿದೆ. ಬೇರೆ ದೇಶಗಳಿಗೆ ಪೈಪೋಟಿ ಕೊಟ್ಟು ಬೆಳೆಯುತ್ತಿದೆ. ಕೇವಲ ರಸ್ತೆ, ನೀರು ಕೊಡುವುದಷ್ಟೇ ಅಲ್ಲ, ಮಾಧ್ಯಮ, ಮೊಬೈಲ್ ಮೂಲಕ ಪ್ರತಿಯೊಬ್ಬರ ಕೈಯಲ್ಲಿ ಮಾಹಿತಿ ದೊರೆಯುತ್ತಿರುವುದರಿಂದ ಜಗತ್ತಿನ ಎಲ್ಲ ಮಾಹಿತಿ ದೊರೆಯುವಂತಾಗಿದೆ. ಎಲ್ಲರ ಕೈಗೆ ಮಾಹಿತಿ ತಂತ್ರಜ್ಞಾನ ನೀಡಿದ್ದು ಪ್ರಧಾನಿ ನರೇಂದ್ರ ಮೋದಿಯವರು ಎಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಗುರುವಾರ ರೋಣ ವಿಧಾನಸಭಾ ಕ್ಷೇತ್ರದ ಹಿರೇಹಾಳ, ಶಾಂತಗೇರಿ, ಮುಶಿಗೇರಿ ಹಾಗೂ ಇಟಗಿ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರದಿಂದ ಇದುವರೆಗೂ ಬಡತನ ನಿರ್ಮೂಲನೆ ಆಗಲಿಲ್ಲ. ಕಳೆದ ಹತ್ತು ವರ್ಷದಲ್ಲಿ ಮೋದಿಯವರು 15 ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲೆತ್ತಿದ್ದಾರೆ. ರಾಜ್ಯದಲ್ಲಿ 36 ಲಕ್ಷ ಜನರಿಗೆ ಮುದ್ರಾ ಯೋಜನೆ ಅಡಿಯಲ್ಲಿ ಸಾಲ ದೊರೆತಿದೆ. 58 ಲಕ್ಷ ರೈತರಿಗೆ ಕಿಸಾನ್ ಸಮ್ಮಾನ್ ಪ್ರಯೋಜನ ದೊರೆತಿದೆ. 12 ಲಕ್ಷ ಗ್ಯಾಸ್ ಸಂಪರ್ಕ ನೀಡಿದ್ದಾರೆ. ಈ ಎಲ್ಲ ಸೌಲಭ್ಯಗಳನ್ನು ಗ್ರಾಮೀಣ



ಜನರಿಗೆ ತಲುಪಿಸುವ ಕೆಲಸವನ್ನು ಮೋದಿಯವರು ಮಾಡಿದ್ದಾರೆ ಎಂದರು.

ಇಂಡಿಯಾ ಒಕ್ಕೂಟದ 26 ಪಕ್ಷಗಳಲ್ಲಿ ಮೋದಿಯವರ ಸಮಾನಾದ ನಾಯಕರು ಯಾರೂ ಇಲ್ಲ. ಕೊಟ್ಟ ಕುದುರೆ ಏರದವನು ವೀರನೂ ಅಲ್ಲ, ಶೂರನೂ ಅಲ್ಲ. ಸವಾಲನ್ನು ಸ್ವೀಕಾರ ಮಾಡಿ ಅದನ್ನು ಗೆಲುವಾಗಿ ಪರಿವರ್ತಿಸುವ ಛಲ ನರೇಂದ್ರ ಮೋದಿಯವರಿಗೆ ಮಾತ್ರ ಇದೆ. ಹೀಗಾಗಿ ಮೋದಿಯವರು ಜನರ ನಾಯಕ ಆಗಿದ್ದಾರೆ ಎಂದು ಹೇಳಿದರು.

ನಾನು ವಿಧಾನ ಪರಿಷತ್ ಸದಸ್ಯನಾಗಿ ಈ ಭಾಗದಲ್ಲಿ ಕಳಸಾ ಬಂಡೂರಿ ಹೋರಾಟ ಮಾಡಿದ್ದೇನೆ. ಕಳಕಪ್ಪ ಬಂಡಿಯವರು ಶಾಸಕರಾದಾಗ ಈ ಭಾಗದ ಅಭಿವೃದ್ಧಿ ಆಗಿದೆ. ನಮ್ಮ ಶಿಗ್ಗಾವಿ ಕ್ಷೇತ್ರದಲ್ಲಿ ಎಲ್ಲ ರೀತಿಯ ಅಭಿವೃದ್ಧಿ ಆಗಿ ಈಗ ಔದ್ಯೋಗೀಕರಣ ಆಗುತ್ತಿದೆ. ಸುಮಾರು 10 ಸಾವಿರ ಮಹಿಳೆಯರಿಗೆ ಉದ್ಯೋಗ ದೊರೆಯುತ್ತಿದೆ. ನಾನು ಈ ಚುನಾವಣೆಯಲ್ಲಿ ನರೇಂದ್ರ ಮೋದಿಯವರ ಸೂಚನೆ ಮೇರೆಗೆ ಸ್ಪರ್ಧೆ ಮಾಡಿದ್ದೇನೆ. ಕಳಕಪ್ಪ ಬಂಡಿಯವರಿಗೆ ಆಗಿರುವ ಅನ್ಯಾಯಕ್ಕೆ ಈ ಕ್ಷೇತ್ರದ ಅಭಿವೃದ್ಧಿಗೆ ಅನ್ಯಾಯವಾಗದಂತೆ ನೋಡಿಕೊಳ್ಳುವ ಕೆಲಸ ಮಾಡುತ್ತೇನೆ ಎಂದರು.

ಬಸವರಾಜ್ ಬೊಮ್ಮಾಯಿ ರೋಣ ವಿಧಾನಸಭಾ ಕ್ಷೇತ್ರದ ಹಿರೇಹಾಳ ಗ್ರಾಮಕ್ಕೆ ತಲುಪುತ್ತಿದ್ದಂತೆ ಮಳೆ ಸಿಂಚನವಾಯಿತು. ಮಳೆ ಹನಿಯ ನಡುವೆಯೇ ನೆರೆದಿದ್ದ ಜನರನ್ನು ಉದ್ದೇಶಿಸಿ ಮಾತನಾಡಿ, ಮಳೆ ಶುಭ ಸಂಕೇತ. ಮಳೆ ಬಂದರೆ ಮೋದಿ ಸರ್ಕಾರ ಬರುತ್ತದೆ ಎಂಬ ಗ್ಯಾರಂಟಿ ಇದೆ. ಮಳೆಯ ಹಿನ್ನೆಲೆಯಲ್ಲಿ ಮತ್ತೊಮ್ಮೆ ಗ್ರಾಮಕ್ಕೆ ಭೇಟಿ ನೀಡುವುದಾಗಿ ಹೇಳಿ ಬಸವರಾಜ ಬೊಮ್ಮಾಯಿ ತೆರಳಿದರು.

> ಮೋದಿಯವರು 10 ವರ್ಷಗಳಲ್ಲಿ ದೇಶದ ಅಭಿವೃದ್ಧಿಗೆ ವೇಗ ನೀಡಿದ್ದಾರೆ. ಅವರ ಗುರಿ ಮುಟ್ಟಲು ಮತ್ತೆ ಅವರನ್ನೇ ಪ್ರಧಾನ ಮಂತ್ರಿಯಾಗಿ ಮಾಡಬೇಕು. ಇಲ್ಲದಿದ್ದರೆ ನಾವು ಮತ್ತೆ ಹಿನ್ನಡೆ ಅನುಭವಿಸಬೇಕಾಗುತ್ತದೆ. ಮೋದಿಯವರು ನಗರದಿಂದ ಗ್ರಾಮೀಣದವರೆಗೆ ಎಲ್ಲ ರಂಗದಲ್ಲಿಯೂ ಅಭಿವೃದ್ಧಿ ಮಾಡಿದ್ದಾರೆ. ಅವರು ಮತ್ತೆ ಬಂದರೆ ನಮ್ಮ ಊರು ಆರ್ಥಿಕವಾಗಿ ಸಬಲವಾಗುತ್ತದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

## ಸಚಿವ ಎಚ್.ಕೆ. ಪಾಟೀಲರಿಂದ ರಂಜಾನ್ ಶುಭಾಶಯ



■ ವಿಜಯಸಾಕ್ಷಿ ಸುದ್ದಿ, ಗದಗ

ಮುಸ್ಲಿಂ ಬಾಂಧವರ ಪವಿತ್ರ ಹಬ್ಬವಾದ ಕುತುಬ್ ಎ.ರಂಜಾನ ಹಬ್ಬದ ನಿಮಿತ್ತ ಡಂಬಳ ನಾಕಾದ ಹತ್ತಿರವಿರುವ ಈದ್ಗಾ ಮೈದಾನದಲ್ಲಿ ಪ್ರಾರ್ಥನೆ ಸಲ್ಲಿಸಿದ ಗದಗ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಸದಸ್ಯರು, ಕನ್ನಡ ಸಾಹಿತ್ಯ ಪರಿಷತ್ತಿನ ಗದಗ ಜಿಲ್ಲೆಯ ಗೌರವ ಕಾರ್ಯದರ್ಶಿಗಳಾದ ಪ್ರೊ. ಕಿಶೋರಬಾಬು ಜೆ.ನಾಗರಕಟ್ಟಿಯವರಿಗೆ ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರು ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಪ್ರಾಚ್ಯವಸ್ತು ಶಾಸ್ತ್ರಜ್ಞ ಅ.ದ. ಕಟ್ಟಿಮನಿ, ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ ಬಿ.ಬಿ. ಅಸೂಟಿ ಉಪಸ್ಥಿತರಿದ್ದರು.

## ಮೋದಿಯವರ ಕೈಗಳನ್ನು ಬಲಪಡಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮೋದಿಯವರ ಹತ್ತು ವರ್ಷಗಳ ಆಡಳಿತದಲ್ಲಿ ದೇಶ ಪ್ರಗತಿಯನ್ನು ಸಾಧಿಸಿದೆ. ಹಿಂದೆ ಆರ್ಥಿಕ ಪ್ರಗತಿಯಲ್ಲಿ 11ನೇ ಸ್ಥಾನದಲ್ಲಿದ್ದ ದೇಶವನ್ನು ಇಂದು 5 ಸ್ಥಾನಕ್ಕೆ ತಂದು ನಿಲ್ಲಿಸಿದ್ದಾರೆ. ಅದಕ್ಕಾಗಿ ಮೋದಿ ಮತ್ತೊಮ್ಮೆ ಪ್ರಧಾನಿಯಾಲಿ ಎಂದು ಆಶಿಸಿ, ನನ್ನ ಹುಟ್ಟೂರು ನಿಡಗುಂದಿಯಲ್ಲಿನ ದೇವರುಗಳಿಗೆ ನಾವೆಲ್ಲರೂ ಸೇರಿ ಪೂಜೆ ನೆರವೇರಿಸಿದ್ದೇವೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ತಮ್ಮ ಹುಟ್ಟೂರು ನಿಡಗುಂದಿಗೆ ಆಗಮಿಸಿ ಅಲ್ಲಿನ ಅನೇಕ ದೇವಸ್ಥಾನಗಳಲ್ಲಿ ಮೋದಿ ಮತ್ತೊಮ್ಮೆ ಪ್ರಧಾನಿಯಾಗಲಿ ಎಂದು ಪ್ರಾರ್ಥಿಸಿ ಪೂಜೆ ನೆರವೇರಿಸಿದ ನಂತರ ಅವರು ಮಾತನಾಡಿದರು.

ದೇಶದ ಹಣೆಬರಹವನ್ನು ನಿರ್ಧರಿಸುವ ಸಂಧಿಕಾಲದಲ್ಲಿ ನೀವಿದ್ದೀರಿ. ದೇಶದ ರಕ್ಷಣೆಯ ಹೊಣೆ ಹೊತ್ತಿರುವ ನರೇಂದ್ರ ಮೋದಿಯವರನ್ನು ಮತ್ತೆ ಪ್ರಧಾನಿ ಮಾಡಲು ಬಿಜೆಪಿಗೆ ಮತ ನೀಡಿ. ನಮ್ಮ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿರುವ ಬಸವರಾಜ ಬೊಮ್ಮಾಯಿಯವರಿಗೆ ಮತ ನೀಡಿ ಅತ್ಯಧಿಕ ಬಹುಮತದಿಂದ ಅವರನ್ನು ಆರಿಸಿ ತಂದು ಮೋದಿಯವರ ಕೈ ಬಲಪಡಿಸಿ ಎಂದರು.



ಮೋದಿಯಂತಹ ಮಹಾನ್ ನಾಯಕರ ದಕ್ಷ ಆಡಳಿತದಿಂದ ಶತ್ರು ರಾಷ್ಟ್ರಗಳ ದಾಳಿ ನಿಯಂತ್ರಣವಾಗಿದೆ. ಭ್ರಷ್ಟಾಚಾರ ರಹಿತ ದೇಶದ ಅಭಿವೃದ್ಧಿಯ ಹರಿಕಾರರಾಗಿರುವ ಮೋದಿಯವರ ಕೈಗಳನ್ನು ಬಲಪಡಿಸುವ ಮೂಲಕ ನಿಮ್ಮ ರಾಷ್ಟ್ರ ರಕ್ಷಣೆಗೆ ಮುಂದಾಗಿ ಎಂದು ಸಂಕನೂರ ಹೇಳಿದರು.

ಈ ಸಂದರ್ಭದಲ್ಲಿ ಜಗದೀಶ ಕರಡಿ, ಹನುಮಪ್ಪ ಕೊಪ್ಪದ, ಕಳಕಪ್ಪ ಬೆಟಗೇರಿ, ಕಳಕಪ್ಪ ಅಣಗೌಡ್ರ, ಪಂಚಾಕ್ಷರಿ ಕರಡಿ, ಅಂದಪ್ಪ ಅಣಗೌಡ್ರ, ವೀರಭದ್ರಪ್ಪ ಲಗುಬಗಿ, ಶರಣಪ್ಪಗೌಡ ಪಾಟೀಲ, ಬಿ.ಕೆ. ಹೊಟ್ಟಿನ, ಎಫ್.ಡಿ. ಮಾದರ, ವಿ.ಎ. ಕಂಬಳಿ, ಸುಭಾಸ ಸಂಕನೂರ ಸೇರಿದಂತೆ ಧುರೀಣರು, ಅಭಿಮಾನಿಗಳು, ಬಿಜೆಪಿ ಪಕ್ಷದ ಕಾರ್ಯಕರ್ತರುಗಳು ಉಪಸ್ಥಿತರಿದ್ದರು.

### ರೋಟರಿ ಸಂಸ್ಥೆಯ ಸಾಪ್ತಾಹಿಕ ಸಭೆಯಲ್ಲಿ ಡಾ. ಕುಮಾರ ಕಂಠಿಮಠ

## ಮೃತದೇಹವನ್ನು ವೈದ್ಯಕೀಯ ಕಾಲೇಜುಗಳಿಗೆ ದಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ವೈದ್ಯರಾಗಬೇಕಾದರೆ ಶರೀರ ರಚನೆ ಹಾಗೂ ಪ್ರತಿ ಅಂಗದ ಕಾರ್ಯ ಕುರಿತು ನಿಖರವಾದ ಜ್ಞಾನವಿರಬೇಕು. ಈ ಅವಶ್ಯಕ ಜ್ಞಾನಕ್ಕಾಗಿ ಶರೀರವನ್ನು ಛೇದಿಸಿ ಅದನ್ನು ಅಭ್ಯಾಸ ಮಾಡಬೇಕಾಗುತ್ತದೆ. ಈ ಕಾರಣಕ್ಕಾಗಿ ಮೃತದೇಹದ ಅವಶ್ಯಕತೆ ಇದೆ ಎಂದು ಡಿಜಿಎಮ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕ ಡಾ. ಕುಮಾರ ಕಂಠಿಮಠ ಅಭಿಪ್ರಾಯಪಟ್ಟರು.

ರೋಟರಿ ಸಂಸ್ಥೆಯ ಸಾಪ್ತಾಹಿಕ ಸಭೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ಮೃತರಾದ ನಂತರ ತಮ್ಮ ದೇಹವನ್ನು ವೈದ್ಯಕೀಯ ಕಾಲೇಜಿಗೆ ದಾನ ನೀಡಬೇಕೆಂದು ವಿನಂತಿಸಿದರಲ್ಲದೆ, ಮೃತ ವ್ಯಕ್ತಿಯು ದೇಹವನ್ನು ದಾನ ನೀಡಲು ಬೇಕಾಗಿರುವ ಅರ್ಹತೆ ಹಾಗೂ ವಾರಸುದಾರರ ಒಪ್ಪಿಗೆ ಅಗತ್ಯವಿದ್ದು, ವ್ಯಕ್ತಿಯು ಸಹಜವಾಗಿ ಸಾವನ್ನಪ್ಪಿರಬೇಕೆಂದು ತಿಳಿಸಿದರು.




ಈ ಸಂದರ್ಭದಲ್ಲಿ ಹಿರಿಯರಾದ ರತ್ನಾ ಶಿದ್ರಾಮಪ್ಪ ಯಳಮಲಿಯವರು ಮರಣಾನಂತರ ತಮ್ಮ ದೇಹವನ್ನು ಡಿ.ಜಿ.ಎಮ್. ಆಯುರ್ವೇದಿಕ ವೈದ್ಯಕೀಯ ಕಾಲೇಜಿಗೆ ದಾನ ನೀಡಲು ಒಪ್ಪಿಗೆ ನೀಡಿದರು. ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ ಸ್ವಾಗತಿಸಿದರು. ರೊ. ಬಾಲಕೃಷ್ಣ ಪಿ.ಕಾಮತ್ ಅತಿಥಿಗಳನ್ನು ಹಾಗೂ ಆತಿಥ್ಯ ವಹಿಸಿದ ರೊ. ವಿಶ್ವನಾಥ ಯಲಮಲಿವರನ್ನು ಸಭೆಗೆ ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಸದಸ್ಯರಾದ ರೊ. ಡಾ. ಕಮಲಾಕ್ಷಿ ಅಂಗಡಿ, ಎಸ್.ಎಸ್. ಹೊಸಳ್ಳಿಮಠ, ರೊ. ಕಿಶೋರ ರೇವಣಕರ, ಡಾ. ರಾಜೇಂದ್ರ ಗಚ್ಚಿನಮಠ, ಹೆಚ್.ಎಸ್. ಪಾಟೀಲ, ಡಾ. ಜಿ.ಬಿ. ಪಾಟೀಲ, ಡಾ. ಪ್ರದೀಪ್ ಉಗಲಾಟ, ಡಾ. ಆರ್.ಬಿ. ಉಪ್ಪಿನ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಅಕ್ಷಯ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು. ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪುರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಸುಶಿಕ್ಷಿತ ಸಮಾಜದಲ್ಲಿ ಮೃತದೇಹವನ್ನು ಮಣ್ಣಿನಲ್ಲಿ ಹೂಳುವುದು ಅಥವಾ ಅಗ್ನಿ ಸ್ಪರ್ಶಮಾಡಿ ಅದನ್ನು ಪ್ರಕೃತಿಯಲ್ಲಿ ವಿಲೀನಗೊಳಿಸಲಾಗುತ್ತದೆ. ಹೀಗೆ ಮಾಡದೆ ಮೃತದೇಹವನ್ನು ವೈದ್ಯಕೀಯ ಕಾಲೇಜುಗಳಿಗೆ ದಾನ ನೀಡುವುದರಿಂದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಉಪಕಾರ ಮಾಡಿದಂತಾಗುತ್ತದೆ ಎಂದು ಡಾ. ಕುಮಾರ ಕಂಠಿಮಠ ತಿಳಿಸಿದರು.

## ರಂಜಾನ್ ಹಬ್ಬ ದಾನ-ಧರ್ಮದ ಸಂಕೇತ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ರಂಜಾನ್ ಹಬ್ಬವು ದಾನ-ಧರ್ಮದ ಸಂಕೇತವಾಗಿದೆ ಎಂದು ಧರ್ಮಗುರು ಇಸ್ಮಾಯಿಲ್ ಖಾಜಿ ಹೇಳಿದರು.

ಅವರು ಪಟ್ಟಣದ ಈದ್ಗಾ ಮೈದಾನದಲ್ಲಿ ಪವಿತ್ರ ರಂಜಾನ್ ಹಬ್ಬದ ನಿಮಿತ್ತ ಸಾಮೂಹಿಕ ಪ್ರಾರ್ಥನೆ ಸಂದರ್ಭದಲ್ಲಿ ಮಾತನಾಡಿ, ನಾವೆಲ್ಲರೂ ಒಂದೇ ತಾಯಿಯ ಮಕ್ಕಳು.ಹಸಿದವರಿಗೆ, ಬಡವರಿಗೆ ನೊಂದು-ಬೆಂದವರಿಗೆ ದಾನ ಧರ್ಮ ಮಾಡುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ. ಆದ್ದರಿಂದ ನಮ್ಮ ಕಾಯಕದಲ್ಲಿನ ಸಂಪತ್ತಿನಲ್ಲಿನ ಸ್ವಲ್ಪವನ್ನಾದರೂ ದಾನ-ಧರ್ಮ ಮಾಡಬೇಕು ಎಂದರು.

ಬೆಳಿಗ್ಗೆಯಿಂದ ಮುಸ್ಲಿಂ ಬಾಂಧವರು ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಸಾಮೂಹಿಕ ಪ್ರಾರ್ಥನೆಯ ನಂತರ ಪರಸ್ಪರ ರಂಜಾನ್ ಹಬ್ಬದ ಶುಭಾಶಯಗಳನ್ನು ಕೋರಿದರು. ಪ್ರಾರ್ಥನೆಯ ನಂತರ ಶರಬತ್ ವಿತರಿಸಲಾಯಿತು.

ಯುವ ಮುಖಂಡ ಕೃಷ್ಣಗೌಡ ಪಾಟೀಲ್, ಪ.ಪಂ ಸದಸ್ಯ ಇಮ್ಮಣ್ಣಾ ಶೇಖ, ಎ.ಡಿ. ಮುಜಾವಾರ, ತಾಜುದ್ದಿನ ಕಿಂಡ್ರಿ, ಹಜರೇಸಾಬ ಖವಾಸ, ಮೌಲಾಸಾಬ ಸದರಭಾವಿ, ಮಾಬುಸಾಬ ದುರ್ಗಿಗುಡಿ, ಸೈಯದಲಿ ಶೇಖ ಹುಶೇನಸಾಬ ಕಲೇಗಾರ, ಎಂ.ಎಚ್. ಹುಬ್ಬಳ್ಳಿ, ಇಮಾಮಸಾಬ ನದಾಫ್, ಹಜರೇಸಾಬ ಖವಾಸ, ಎಚ್.ಎಂ. ನದ್ದಿಮುಲ್ಲಾ, ಹಜರತ್‌ಅಲಿ ಲಾಡಸಾಬನವರ, ಖಲಂದರ ಗಾಡಿ, ಖಾನ್‌ಸಾಬ ಲಾಡಂನವರ, ಇಸ್ಮಾಯಿಲ್ ಸುಂಕದ, ಇಸ್ಮಾಯಿಲ್ ಖಾಗದ, ಮಾಬುಸಾಬ ಅಬ್ಬುನವರ, ದಾವುದ ಜಮಾಲಸಾಬನವರ, ಹೈದರ ಖವಾಸ, ಅಲ್ಲಾಭಕ್ಷಿ ಹೊಂಬಳ ಮುಂತಾದವರಿದ್ದರು.

## ಸಂಪಾದಕೀಯ

# ಸೈನಿಕ ಶಾಲೆಗಳನ್ನಾದರೂ ಬಿಡಿ

ಕೇಂದ್ರದಲ್ಲಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಖಾಸಗಿಕರಣ ನೀತಿಯನ್ನು ಬಹುವಾಗಿಯೇ ಜಾರಿಗೊಳಿಸುತ್ತಿದೆ. ವಿಮಾನ ನಿಲ್ದಾಣಗಳು ಸೇರಿದಂತೆ ಅನೇಕ ಸರ್ಕಾರಿ ಸಂಸ್ಥೆಗಳನ್ನು ಖಾಸಗಿಕರಣ ಮಾಡಿದೆ.

ಖಾಸಗಿಕರಣ ನೀತಿ ರಾಜಕೀಯ ಚರ್ಚಾ ವಿಷಯವಾಗಿ ದೇಶಾದ್ಯಂತ ಸದ್ದು ಮಾಡುತ್ತಿದೆ. ಭಾರೀ ಜನಾಕ್ರೋಶ ವ್ಯಕ್ತವಾದರೂ ಬಿಜೆಪಿ ಸರಕಾರ ಮಾತ್ರ ಖಾಸಗಿಕರಣ ಮುಂದುವರಿಸುತ್ತಲೇ ಇದೆ.

ಈ ಖಾಸಗಿಕರಣದ ಸಾಲಿಗೆ ಈಗ ಸೈನಿಕ ಶಾಲೆಗಳು ಸೇರ್ಪಡೆಯಾಗುತ್ತಿದೆ. ದೇಶದಲ್ಲಿ ಸೈನಿಕ ಶಾಲೆಗಳು ತಮ್ಮದೇ ಆದಂತಹ ಶಿಕ್ಷಣ ವ್ಯವಸ್ಥೆಯನ್ನ ಹೊಂದಿವೆ. ಸೈನಿಕ ಶಾಲೆಗಳು ಭವಿಷ್ಯದ ಯೋಧರನ್ನು ನಿರ್ಮಾಣ ಮಾಡುವಂತ ತರಬೇತಿ ನೀಡುವ ಕೇಂದ್ರಗಳಾಗಿಯೂ ಗುರುತಿಸಿಕೊಂಡಿವೆ.

ವಿಶೇಷವಾಗಿ ಸೈನಿಕರ ಮಕ್ಕಳಿಗೆ ಅಲ್ಲಿ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಸೇನೆಯ ಅಡಿಯಲ್ಲಿಯೇ ಈ ಸೈನಿಕ ಶಾಲೆಗಳು ನಡೆಯುತ್ತಿವೆ. ಆದರೆ ಈಗಿನ ಬಿಜೆಪಿ ಸರ್ಕಾರ ಈ ಶಾಲೆಗಳನ್ನು ಸಹ ಖಾಸಗಿಕರಣ ಮಾಡುವುದನ್ನು ನಡೆಸಿದೆ.

ಸೈನಿಕ ಶಾಲೆಗಳ ನಿರ್ವಹಣೆ ಕೇಂದ್ರ ಸರ್ಕಾರಕ್ಕೆ ದೊಡ್ಡ ಹೊರೆ ಅಲ್ಲ. ಸೈನಿಕ ಶಾಲೆಗಳಿಂದ ಆದಾಯ ಬರೆದಿದ್ದರು ದೇಶಕ್ಕೆ ಉತ್ತಮ ಮಾನವ ಸಂಪನ್ಮೂಲ ಮಾತ್ರ ಯಾವಾಗಲೂ ಲಭ್ಯವಾಗುತ್ತಿದೆ. ಇಂತಹ ಒಳ್ಳೆಯ ಶಾಲೆಗಳನ್ನು ಕೇಂದ್ರ ಸರ್ಕಾರ ಮತ್ತಷ್ಟು ಉತ್ತಮ ರೀತಿಯಿಂದ ನಿರ್ವಹಣೆ ಮಾಡಲು ಸಾಧ್ಯವಿತ್ತು. ದೇಶಾದ್ಯಂತ ಸೈನಿಕ ಶಾಲೆಗಳನ್ನ ಹೆಚ್ಚಿಸಬಹುದಿತ್ತು. ಇದ್ಯಾವುದನ್ನೇ ಮಾಡದೆ ಬಿಜೆಪಿ ಶಾಲೆಗಳನ್ನು ಖಾಸಗಿಕರಣ ಮಾಡಲು ಹೊರಟಿದೆ.

ಲೋಕಸಭೆ ಚುನಾವಣೆ ಇರುವುದರಿಂದ ಸದ್ಯ ಸೈನಿಕ ಶಾಲೆಗಳ ಖಾಸಗಿಕರಣ ವಿಷಯ ಚರ್ಚೆಯಾಗುತ್ತಿಲ್ಲ. ಆದರೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಚುನಾವಣೆ ಮಧ್ಯೆಯೂ ರಾಷ್ಟ್ರಪತಿಗಳಿಗೆ ಪತ್ರ ಬರೆದು ಶಾಲೆಗಳನ್ನ ಖಾಸಗಿಕರಣ ಮಾಡದಂತೆ ಮನವಿ ಮಾಡಿಕೊಂಡಿದ್ದಾರೆ.

ಒಂದು ಸುಸ್ಥಿರ ಮತ್ತು ಸುಭದ್ರ ರಾಷ್ಟ್ರ ನಿರ್ಮಾಣವಾಗಬೇಕಾದರೆ ಶಿಕ್ಷಣ, ಆರೋಗ್ಯ ಮತ್ತು ಪೊಲೀಸ್ ವ್ಯವಸ್ಥೆ ರಾಷ್ಟ್ರೀಕರಣದ ವ್ಯಾಪ್ತಿಗೆ ಒಳಪಡಬೇಕು. ಆದರೆ ಭಾರತದಲ್ಲಿ ಶಿಕ್ಷಣ ಮತ್ತು ಆರೋಗ್ಯ ಬಹುತೇಕ ಖಾಸಗಿಕರಣವಾಗಿದೆ. ಈ ವ್ಯವಸ್ಥೆ ಬದಲಾಗಬೇಕಾದರೆ ಮತದಾರರು ಪ್ರಜ್ಞೆಯಿಂದ ಮತ ಚಲಾಯಿಸಬೇಕು.

### ಬೇಸಿಗೆ ರಜಾ ದಿನ ಕಳೆಯುವದು ಹೇಗೆ? | ಮಕ್ಕಳು-ಪಾಲಕರಿಗೊಂದಿಷ್ಟು ಕಿವಿಮಾತು

# ಮಕ್ಕಳಿಗೆ ರಜಾ ಮಜಾ

ಶಾಲಾ ವಾರ್ಷಿಕ ಪರೀಕ್ಷೆ ಮುಗಿದು ಬೇಸಿಗೆ ರಜೆ ಬಂತು. ಎಪ್ರೀಲ್ ಮತ್ತು ಮೇ ಎರಡು ತಿಂಗಳು ನಾವಿನ್ನು ಸ್ವತಂತ್ರರು ಎಂದು ಬಾನಾಡಿಯಂತೆ ಸ್ವಚ್ಛಂದವಾಗಿ ವಿಹರಿಸುಲು ಹಾಗ ಕುಣಿದು ಕುಪ್ಪಳಿಸುವ ಮಕ್ಕಳು ಒಂದು ಕಡೆ ತಯಾರಾದರೆ, ಮತ್ತೊಂದೆಡೆ ಯಾಕಾದರೂ ರಜೆ ಕೊಟ್ರಪ್ಪಾ! ಮಕ್ಕಳು ನಮ್ಮ ತಲೆ ತಿನ್ನುತ್ತಾರೆ, ಮಕ್ಕಳನ್ನು ಹಿಡಿಯುವುದೇ ಒಂದು ತಲೆನೋವಾಗುತ್ತೆ ಎಂದು ತಾಯಂದಿರು ಮಾತಾಡುವುದುಂಟು. ಹಾಗಾದ್ರೆ, ರಜಾ ಹೇಗೆ ಕಳಿಯೋದು ಅಂತಿರಾ? ನಾ ಹೇಳಿದಂತೆ ನೀವು ಮಾಡಿದರೆ ನಿಮ್ಮ ರಜಾ ದಿನದಲ್ಲಿ ಹೊಸದೊಂದು ಅನುಭವ ಸಿಗುತ್ತದೆ, ಜೊತೆಯಲ್ಲೇ ಮಜಾನು ಸಿಗುತ್ತೆ. ಹೊಸ ಚೈತನ್ಯವನ್ನು ಮೂಡಿಸುವ ರಜೆಯನ್ನು ಹೆತ್ತವರ ಕಾರ್ಯಕ್ಕೆ ತೊಂದರೆ ಆಗದಂತೆ ಮಕ್ಕಳಾದ ತಮಗೂ ಬೇಜಾರಾಗದಂತೆ, ಮಕ್ಕಳನ್ನು ಕ್ರಿಯಾತ್ಮಕ ಚಟುವಟಿಕೆಗಳಿಗೆ ತೊಡಗಿಸಿಕೊಳ್ಳುವುದು ಜಾಣತನ. ಸರಿಯಾದ ಕ್ರಮದಲ್ಲಿ ಸರಿಯಾದ ಮಾರ್ಗದಲ್ಲಿ ಮುನ್ನಡೆದರೆ ಯಶಸ್ಸು ತಮ್ಮದಾಗುತ್ತದೆ ಎಂಬುದನ್ನು ಅರ್ಥೈಸಿಕೊಳ್ಳಬೇಕು. ರಜಾ ಅವಧಿಯನ್ನು ವ್ಯರ್ಥ ಮಾಡದೆ ಸದುಪಯೋಗ ಮಾಡಿಕೊಳ್ಳಬೇಕು. ಹೇಗೆ ಅಂತೀರಾ? ಇಲ್ಲಿದೆ ಕೆಲವೊಂದು ಟಿಪ್ಸ್.

* ರೈತರ ಮಕ್ಕಳಾಗಿದ್ದರೆ, ಮನೆಪಾಠ ಮುಗಿದ ಮೇಲೆ ತಂದೆ- ತಾಯಿಗಳಿಗೆ ಹೊಲದ ಕೆಲಸಕ್ಕೆ ಸಹಾಯ ಮಾಡಿ. ಪಾಲಕರೂ ಖುಷಿಯಾಗುತ್ತಾರೆ, ನಿಮಗೂ ಸಮಯದ ಸದುಪಯೋಗವಾಗುತ್ತದೆ.

* ಪಟ್ಟಣದಲ್ಲಾದರೆ, ಮನೆಯ ಮುಂದೆ



ಕೈತೋಟ ಮಾಡಿರುತ್ತಾರೆ. ಅದರಲ್ಲಿ ಮುಂಜಾನೆ ಹಾಗೂ ಸಮಯದಲ್ಲಿ ನೀರು ಹಾಕುವುದು, ಕಳೆ ಕೀಳುವುದು ಮಾಡಿದರೆ ನಿಮಗೂ ಪ್ರಕೃತಿಯ ಮೇಲೆ ಕಾಳಜಿ ಉಂಟಾಗುತ್ತದೆ. ನಿಮ್ಮನ್ನು ನೋಡಿ ಹೆತ್ತವರಿಗೂ ಸಂತಸವಾಗುತ್ತದೆ.

* ಶಾಲಾ ದಿನಗಳಲ್ಲಿ ಸಂಬಂಧಿಕರ ಊರುಗಳಿಗೆ ಹೋಗಲು ಆಗಿರುವುದಿಲ್ಲ. ಅಜ್ಜ-ಅಜ್ಜಿಯರ ಜೊತೆ ಹರಟೆ ಹೊಡೆಯಲೂ ಆಗಿರುವುದಿಲ್ಲ. ಸ್ವಲ್ಪ ದಿನದ ಮಟ್ಟಿಗೆ ಕುಟುಂಬ ಸಮೇತ ಅಜ್ಜಿ ಊರಿಗೆ ಹೋಗಿ. ಅವರೊಂದಿಗೆ ಪ್ರೀತಿ-ವಿಶ್ವಸದಿಂದ ನಲಿಯಿರಿ. ಅವಿಭಕ್ತ ಕುಟುಂಬದಲ್ಲಿ ಸೇರಿದರೆ ಎಷ್ಟೆಲ್ಲಾ ಸಂತಸ ಸಿಗುತ್ತದೆ ಎಂಬುದನ್ನು ತಿಳಿಯಬಹುದು.

* ಹಳ್ಳಿಗೆ ತೆರಳಿ ಅಲ್ಲಿ ಚಿಕ್ಕಪ್ಪ, ದೊಡ್ಡಪ್ಪನೊಂದಿಗೆ ಹೊಲ-ಗದ್ದೆಗಳಿಗೆ ಹೋಗಿ ಅಲ್ಲಿರುವ ಬೆಳೆಗಳ ಬಗ್ಗೆ ಮಾಹಿತಿ ಪಡೆಯಿರಿ.

* ಸಮಯ ಸಿಕ್ಕರೆ ಸಂಗೀತ, ಸಾಹಿತ್ಯ ರಚನೆ, ರಂಗ ತರಬೇತಿ, ಯೋಗ, ಕ್ರೀಡಾ ತರಬೇತಿ ನೀಡುವ ಬೇಸಿಗೆ ಶಿಬಿರಗಳಲ್ಲಿ ಭಾಗವಹಿಸಿ. ಮನಸ್ಸಿಗೆ ನೆಮ್ಮದಿಯ ಜೊತೆಗೆ ಹೊಸದನ್ನು ಕಲಿತಂತೆ ಆಗುತ್ತದೆ.

* ನಿಮಗೆ ಕಠಿಣವೆನಿಸುವ ವಿಷಯಗಳ ಕೋಚಿಂಗ್ ತೆಗೆದುಕೊಳ್ಳಿ. ಮುಂದೆ ನಿಮ್ಮ ಶಾಲೆಯಲ್ಲಿ ಕಲಿಯಲು ಸುಲಭವಾಗುತ್ತದೆ.

ಮಕ್ಕಳು ರಜಾ ದಿನ ಏನೆಲ್ಲಾ ಮಾಡಬಾರದು?:

* ಅನಾವಶ್ಯಕವಾಗಿ ಹೋಗಬಾರದ ಜಾಗಕ್ಕೆ ಹೋಗಬಾರದು. ಅದು ಅಪಾಯಕ್ಕೆ ಎಡೆಮಾಡಿಕೊಡುತ್ತದೆ.

* ಗೆಳೆಯರ ಜೊತೆ ಸೇರಿ ದುಶ್ಚಟಗಳಿಗೆ ದಾಸರಾಗದಿರಿ. ಹೆತ್ತವರಿಗೆ ಹೊರೆಯಾಗದಿರಿ.

* ಮನೆಯಲ್ಲಿ ಹಠ ಮಾಡುತ್ತಾ, ದಾಂದಲೆ ಮಡುತ್ತಾ, ತಂದೆ-ತಾಯಿಯರಿಗೆ ಬೇಸರ ಹುಟ್ಟಿಸದಿರಿ.

ತಂದೆ ತಾಯಿಯ ಜವಾಬ್ದಾರಿ ಏನು?:

* ಮಕ್ಕಳಿಗೆ ಒತ್ತಡದ ಕಾರ್ಯಕ್ಕೆ ಹಚ್ಚದಿರಿ. ಬರಿಯ ಹೋಂವರ್ಕ್ ಅಂತ ಹೇಳಿ ಅವರಿಗೆ ಹೊರೆ ಮಾಡದಿರಿ.

* ಶಾಲಾ ಹೋಂ ವರ್ಕ್ ಇದ್ದರೂ ಮಕ್ಕಳಿಗೆ ಪ್ರೀತಿಯಿಂದ ಮಾತನಾಡಿಸುತ್ತಾ ಅವರು ಸಂತಸವಾಗಿದ್ದಾರೆ ಎಂದಾಗ ಬರೆಯಲು ಹೇಳಿ.

* ಮಕ್ಕಳು ಪ್ರಾಣಿ-ಪಕ್ಷಿಗಳನ್ನು ಬರಿಯ ಟಿ.ವಿಯಲ್ಲಿ ನೋಡಿರುತ್ತಾರೆ. ಅವರಿಗೆ ನೈಜ ಪ್ರಾಣಿ-ಪಕ್ಷಿಗಳನ್ನು ತೋರಿಸಲು ಪ್ರಾಣಿ ಸಂಗ್ರಾಹಾಲಯಕ್ಕೆ ಕರೆದುಕೊಂಡು ಹೋಗಿ ತೋರಿಸಿ.

* ದೇವಸ್ಥಾನಗಳಿಗೆ ಭೇಟಿ ನೀಡಿ ದೇವರ ದರ್ಶನ ಮಾಡಿಸಿ, ಮಕ್ಕಳಲ್ಲಿ ದೇವರ ಮೇಲೆ ಭಕ್ತಿ ಭಾವ ಹುಟ್ಟುವಂತೆ ಮಾಡಿ.

* ಒಳ್ಳೆಯ ಸಿನಿಮಾ ಹಾಗೂ ಸರ್ಕಸ್‌ನಂತಹ ಮನರಂಜನಾ ಕಾರ್ಯಕ್ರಮಗಳನ್ನು ತೋರಿಸಿ. ಅವರೊಂದಿಗೆ ನೀವು ಬೆರೆತಾಗ ಹೆತ್ತವರ ಪ್ರೀತಿ ಅವರಿಗೆ ಇನ್ನಷ್ಟು ಸಿಕ್ಕಹಾಗೆ ಆಗುತ್ತದೆ.

* ಆಧ್ಯಾತ್ಮಿಕ ಮನೋಭಾವ ಬೆಳೆಸಲು ಯೋಗ ಹಾಗೂ ಧ್ಯಾನ ಮಾಡುವ ಕೇಂದ್ರಕ್ಕೆ ಸೇರಿಸಿ.

* ಒಳ್ಳೆಯ ಪಠ್ಯೇತರ ಚಟುವಟಿಕೆ ಮಾಡಿಸಿ. ಇದರಿಂದ ಮಕ್ಕಳಲ್ಲಿ ಒಳ್ಳೆಯ ಭಾವನೆ ಮೂಡುತ್ತದೆ.

* ಬಿಸಿಲಿನ ತಾಪ ಹೆಚ್ಚಾಗುತಿರುವುದರಿಂದ ಮಕ್ಕಳನ್ನು ಹೊರಗಡೆ ಹೆಚ್ಚು ಹೊತ್ತು ಹೋಗಲು ಬಿಡದಿರಿ.

* ಮಕ್ಕಳಿಗೆ ಆರೋಗ್ಯಕರ ಆಹಾರ ನೀಡಿ, ಹೆಚ್ಚು ನೀರು ಕುಡಿಯಲು ಸಲಹೆ ಕೊಡಿ. ನೀವು ಇಷ್ಟೇಲ್ಲಾ ನಿಯಮಗಳನ್ನು ಪಾಲನೆ ಮಾಡಿ, ತಂದೆ-ತಾಯಿಗೆ ಒಳ್ಳೆಯ ಮಕ್ಕಳಾಗಿ. ಒಳ್ಳೆಯ ಕಾರ್ಯ ಮಾಡಿ, ರಜಾ ದಿನವನ್ನು ಮಜಾ ದಿನವನ್ನಾಗಿ ಆನಂದಿಸಿ. ಇದರೊಂದಿಗೆ ಇನ್ನೂ ತಂದೆ-ತಾಯಿಯರ ಸಲಹೆಯಂತೆ ರಜಾ ದಿನವನ್ನು ಕಳೆಯಿರಿ.

**- ಎಸ್.ಕೆ. ಆಡಿನ.**
ಶಿಕ್ಷಕರು, ಮಾಲಗಿತ್ತಿ.

# ಶೃದ್ಧಾ ಭಕ್ತಿಯ ರಂಜಾನ್ ಆಚರಣೆ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮುಸ್ಲಿಂ ಬಾಂಧವರ ಪವಿತ್ರ ರಂಜಾನ್ ಹಬ್ಬವನ್ನು ಇಲ್ಲಿಯ ಮುಸ್ಲಿಂ ಜಮಾತ್ (ಆಡಳಿತ) ಅಂಜುಮನ್ ಏ ಇಸ್ಲಾಂ ಕಮಿಟಿಯ ಆಶ್ರಯದಲ್ಲಿ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಇಲ್ಲಿಯ ಹಿರೇ ಮಸೂತಿಯಿಂದ ಬಜಾರ ರಸ್ತೆಯ ಮೂಲಕ ಮೆರವಣಿಗೆ ಮುಖಾಂತರ ಹಾತಲಗೇರಿ ರಸ್ತೆಯಲ್ಲಿ ಇರುವ ದರ್ಗಾ-ಕ್ಕೆ ಬಂದು ಎಲ್ಲ ಮುಸ್ಲಿಂ ಭಾಂದವರು ಸೇರಿದರು. ಮೌಲಾನ ಸಲೀಂ ಅಹ್ಮದ ಅವರ ನೇತೃತ್ವದಲ್ಲಿ ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಸಲೀಂ ಅಹ್ಮದ, ಪವಿತ್ರ ರಂಜಾನ್ ಹಬ್ಬವನ್ನು ಅತ್ಯಂತ ಪವಿತ್ರತೆಯಿಂದ ಆಚರಿಸಿದ ಜೀವನ ಪರ್ಯಂತ ದಾನ, ಧರ್ಮ ಹಾಗೂ ಸ'ವ'ುಾಜವ'ು ಖಿಂ'ು'ಾಗಿ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.


ಮುಸ್ಲೀಂ ಜಮಾತ್ (ಆಡಳಿತ) ಅಂಜುಮನ್ ಏ ಇಸ್ಲಾಂ ಕಮಿಟಿಯ ಅಧ್ಯಕ್ಷ ನಜೀರಅಹ್ಮದ ಕಿರೀಟಗೇರಿ, ಉಪಾಧ್ಯಕ್ಷ ದಾದಾಪೀರ ಕೊರ್ಲಹಳ್ಳಿ, ಕಾರ್ಯದರ್ಶಿ ವಾಶೀಂಖಾನ್ ಮಸೂತಿಮನಿ, ಗ್ರಾ.ಪಂ ಸದಸ್ಯ ಪೀರಸಾಬ ನದಾಫ ಸೇರಿದಂತೆ ಸರ್ವ ಮುಸ್ಲಿಂ ಬಾಂಧವರು ಹಾಜರಿದ್ದರು.



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಬಸ್ತಿಬಣದ ಮಾರುತಿ ದೇವಸ್ಥಾನ ರಥೋತ್ಸವ ಮಂಗಳವಾರ ಯುಗಾದಿ ಪಾಡ್ಯದ ದಿನ ಪಟ್ಟಣದ ಶ್ರೀ ಮಳೆಮಲ್ಲಿಕಾರ್ಜುನ ಮಹಾಸ್ವಾಮಿಗಳ ನೇತೃತ್ವದಲ್ಲಿ ನೆರವೇರಿತು. ಬುಧವಾರ ಕಡುಬಿನ ಕಾಳಗ ಜರುಗಿತು. ಹಿರಿಯರಾದ ಮಹದೇವಪ್ಪ ಅಣ್ಣಿಗೇರಿ, ಅಶೋಕ ನೀರಾಲೋಟಿ, ದೇವಪ್ಪ ಕುಂಬಾರ, ವಿಜಯ ಉಮಚಗಿ, ಅಕ್ಷಯ ಓದು, ಮಲ್ಲಪ್ಪ ಕುಂಬಾರ, ಶರಣಪ್ಪ ಗದಗ, ಪ್ರಶಾಂತ ಮಲ್ಲಪ್ಪನವರ, ಬಾಬು ಹಾಲಗುಂಡಗಿ, ಮಂಜುನಾಥ ಮಂಟಗಣಿ ಸೇರಿ ದೇವಸ್ಥಾನ ಕಮೀಟಿಯವರು ಇದ್ದರು.

■ **ವಿಜಯಸಾಕ್ಷಿ ಸುದ್ದಿ, ಗದಗ**



ದೇಶ ಅಭಿವೃದ್ಧಿ ಹೊಂದಲು ಯುವ ಮತದಾರರು ತಪ್ಪದೇ ಮತದಾನ ಮಾಡಬೇಕು. ಮತದಾನ ಪ್ರತಿಯೊಬ್ಬರ ಹಕ್ಕು. ಉತ್ತಮ ಅಭ್ಯರ್ಥಿಗೆ ಮತದಾನ ಮಾಡಿದರೆ ದೇಶದ ಅಭಿವೃದ್ಧಿಗೆ ಮತ ನೀಡಿದಂತೆ. ನನಗೆ ಮೊದಲ ಬಾರಿಗೆ ಮತದಾನ ಹಕ್ಕು ಚಲಾವಣೆ ಮಾಡುತ್ತಿರುವುದು ಖುಷಿ ಆಗುತ್ತಿದೆ.

**- ಅನುಷಾ ಎಂ.ಮೆಣಸಿನಕಾಯಿ.**
**ಇಂಜಿನಿಯರಿಂಗ್ ವಿದ್ಯಾರ್ಥಿನಿ-ಗದಗ.**

# ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಸಾಧನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಹುಲಕೋಟಿಯ ಕೆ.ಎಚ್. ಪಾಟೀಲ್ ಸೆಂಟರ್ ಫಾರ್ ಹ್ಯೂಮನ್ ಎಕ್ಸಲನ್ಸ್, ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ 2023-24ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಅಭೂತಪೂರ್ವ ಸಾಧನೆ ಮಾಡಿದ್ದು, ಕಾಲೇಜಿಗೆ ಶೇ.96.47ರಷ್ಟು ಫಲಿತಾಂಶ ಬಂದಿದೆ.

ಮಹಾವಿದ್ಯಾಲಯುದಿಂದ ಒಟ್ಟು 85 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 27 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಶ್ರೇಣಿ, 49 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.

ವಿದ್ಯಾರ್ಥಿಗಳಾದ ವಿದ್ಯಾ ಮುದರಡ್ಡಿ ಕನ್ನಡ, ಜೀವಶಾಸ್ತ್ರ ಹಾಗೂ ರಸಾಯನಶಾಸ್ತ್ರ ವಿಷಯಗಳಲ್ಲಿ ನೂರಕ್ಕೆ ನೂರರಷ್ಟು ಅಂಕಗಳೊಂದಿಗೆ ಶೇ.97 ಫಲಿತಾಂಶ ಪಡೆದು ಗದಗ ಜಿಲ್ಲೆಗೆ ತೃತೀಯ ಸ್ಥಾನ ಪಡೆದು, ಕಾಲೇಜಿಗೆ ಪ್ರಥಮಳಾಗಿದ್ದಾಳೆ.

ಅನ್ನಪೂರ್ಣ ಬೋರಟ್ಟಿ ರಸಾಯನಶಾಸ್ತ್ರ ವಿಷಯದಲ್ಲಿ ನೂರಕ್ಕೆ ನೂರರಷ್ಟು ಅಂಕಗಳೊಂದಿಗೆ ಶೇ.96.17ರಷ್ಟು ಫಲಿತಾಂಶ ಪಡೆದು ಕಾಲೇಜಿಗೆ ದ್ವಿತೀಯ ಸ್ಥಾನ, ಸೌಮ್ಯ ಹಿರೇಮಠ, ಕುಮಾರ ಮಹಮದ್ ಹನೀಫ್ ಅಡವಿಸೋಮಾಪುರ ಶೇ. 95.50 ಅಂಕ ಗಳಿಸಿ ಕಾಲೇಜಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ಮಹ್ಮದ್ ಇರ್ಷಾನ್ ಧಾರವಾಡ ಶೇ. 94.83ರಷ್ಟು ಅಂಕ ಗಳಿಸಿ, ನಾಲ್ಕನೇ ಸ್ಥಾನ, ಸ್ನೇಹಾ ಮಣಕವಾಡ ಗಣಿತ ವಿಷಯದಲ್ಲಿ ನೂರಕ್ಕೆ ನೂರರಷ್ಟು ಅಂಕ ಗಳಿಸುವುದರೊಂದಿಗೆ ಶೇ. 94.50ರಷ್ಟು ಅಂಕಗಳೊಂದಿಗೆ 5ನೇ ಸ್ಥಾನ ಪಡೆದಿದ್ದಾಳೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜು ಆಡಳಿತ ಮಂಡಳಿಯ ಅಧ್ಯಕ್ಷರು, ಸರ್ವ ಸದಸ್ಯರು, ಪ್ರಾಚಾರ್ಯರು, ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿ, ಶುಭ ಹಾರೈಸಿದ್ದಾರೆ.

# ಕಸ್ಟಮ್ಸ್ ಅಧಿಕಾರಿಗಳ ಸೋಗಿನಲ್ಲಿ ಕರೆ; 2.24 ಕೋಟಿ ರೂ. ಕಳೆದುಕೊಂಡ ಬೆಂಗಳೂರಿನ ಟೆಕ್ಕಿ!

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಇತ್ತೀಚಿಗೆ ಸೈಬರ್ ಕ್ರೈಂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಆನ್‌ಲೈನ್ ವಂಚನೆಗೆ ಒಳಗಾಗಿ ಬೆಂಗಳೂರಿನ ಮಹಿಳೆಯೊಬ್ಬರು 14 ಲಕ್ಷ ರೂ. ಕಳೆದುಕೊಂಡ ಬೆನ್ನಲ್ಲೇ, ತಾವು ದೆಹಲಿಯು ಕಸ್ಟಮ್ಸ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಅಧಿಕಾರಿಗಳು ಎಂದು ಹೇಳಿ, ನಗರದ 52 ವರ್ಷದ ಸಾಫ್ಟ್‌ವೇರ್ ಇಂಜಿನಿಯರ್‌ಗೆ 2.24 ಕೋಟಿ ರೂಪಾಯಿ ವಂಚಿಸಿದ್ದಾರೆ ಎಂದು ಪೊಲೀಸರು




ಗುರುವಾರ ತಿಳಿಸಿದ್ದಾರೆ.

ಬೆಂಗಳೂರಿನ 29 ವರ್ಷದ ಮಹಿಳಾ ವಕೀಲರೊಬ್ಬರಿಗೆ 14.57 ಲಕ್ಷ ರೂಪಾಯಿ ವಂಚಿಸಿದ ರೀತಿಯಲ್ಲೇ ಜಕ್ಕೂರಿನ ಟೆಕ್ಕಿ ಕುಮಾರಸ್ವಾಮಿ ಶಿವಕುಮಾರ್ ಅವರನ್ನು ವಂಚಿಸಲಾಗಿದೆ.

ಮಾರ್ಚ್ 18 ರಿಂದ ಮಾರ್ಚ್ 27 ರ ನಡುವೆ ಸಾಫ್ಟ್‌ವೇರ್ ಇಂಜಿನಿಯರ್ ಕುಮಾರಸ್ವಾಮಿಗೆ ಕಸ್ಟಮ್ಸ್ ಅಧಿಕಾರಿಗಳ ಸೋಗಿನಲ್ಲಿ ಕರೆ ಮಾಡಿದ ವಂಚಕರು, 'ನಿಮ್ಮ ಏರ್ ಪಾರ್ಸಲ್ ದೆಹಲಿಯು ಕಸ್ಟಮ್ಸ್‌ನಲ್ಲಿ ಸೀಜ್ ಮಾಡಲಾಗಿದೆ.

ಅದರಲ್ಲಿ ನಿಮ್ಮ ಹೆಸರಿನ ನಕಲಿ ಪಾಸ್ ಪೋರ್ಟ್, ಬ್ಯಾಂಕ್ ಎಟಿಎಂ ಕಾರ್ಡ್‌ಗಳು, ಎಂಡಿಎಂಎ ಡ್ರಗ್ಸ್ ಇದೆ' ಎಂದು ಸುಳ್ಳು ಹೇಳಿದ್ದಾರೆ.

# ರಾಜ್ಯಾದ್ಯಂತ ಶ್ರದ್ಧಾ ಭಕ್ತಿಯ ರಂಜಾನ್ ಆಚರಣೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜಧಾನಿ ಬೆಂಗಳೂರು ನಗರದಲ್ಲಿ ಇಂದು ಮುಸ್ಲಿಮರು ರಂಜಾನ್ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಕಳೆದೊಂದು ತಿಂಗಳಿಂದ ಶ್ರದ್ಧಾಭಕ್ತಿಯಿಂದ ಉಪವಾಸ ವ್ರತಾಚರಣೆ ಮಾಡಿರುವ ಧರ್ಮೀಯರು, ಗುರುವಾರ ಬೆಳಗ್ಗೆ ಎಲ್ಲ ಮಸೀದಿಗಳಲ್ಲಿಯೂ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ಏಕಕಾಲಕ್ಕೆ ಸಾವಿರಾರು ಮಂದಿ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಬಡ ಜನರಿಗೆ ತಮ್ಮಿಂದಾದ ದಾನ ಮಾಡಿ ಶುಭಾಶಯ ಹಂಚಿಕೊಂಡರು. ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಸಾಮಾಜಿಕ ಜಾಲತಾಣಗಳ ಮೂಲಕ ಹಬ್ಬದ ಶುಭಾಶಯ ಕೋರಿದ್ದಾರೆ.

ರಸ್ತೆ ಸಂಚಾರದಲ್ಲಿ ವ್ಯತ್ಯಯ: ರಂಜಾನ್ ಪ್ರಾರ್ಥನೆಯ ಸಲುವಾಗಿ ಮೈಸೂರು ರಸ್ತೆಗೆ ಹೊಂದಿಕೊಂಡಿರುವ ಚಾಮರಾಜಪೇಟೆಯ ಸುತ್ತಮುತ್ತಲ ರಸ್ತೆಗಳಲ್ಲಿ ಸಂಚಾರ ಬದಲಾವಣೆ ಮಾಡಲಾಗಿತ್ತು. ಬಿಗಿ ಪೊಲೀಸ್ ಬಂದೋಬಸ್ತ್ ಕಂಡುಬಂತು.

ವಿಜಯಪುರ ವರದಿ: ವಿಜಯಪುರ ಜಿಲ್ಲೆಯಾದ್ಯಂತ ರಂಜಾನ್ ಹಬ್ಬದ ಸಡಗರ ಕಳೆಗಟ್ಟಿತ್ತು. ನಗರ ಸೇರಿದಂತೆ ಈದ್ಗಾ ಮೈದಾನಗಳಲ್ಲಿ ಪ್ರಾರ್ಥನೆ ಸಲ್ಲಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಹಾಗೂ ಇತರೆ ಮುಖಂಡರು ಪ್ರಾರ್ಥನೆಯಲ್ಲಿ ಭಾಗಿಯಾಗಿದ್ದರು.

ಬೆಳಗಾವಿ ವರದಿ: ನಗರ ಸೇರಿದಂತೆ ಜಿಲ್ಲೆಯಾದ್ಯಂತ ಈದ್-ಉಲ್-ಫಿತ್ರ್ ಹಬ್ಬಾಚರಣೆ ನಡೆಯಿತು. ಸಾಮೂಹಿಕ ಪ್ರಾರ್ಥನೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಮರು ಪಾಲ್ಗೊಂಡಿದ್ದರು.

ದಾವಣಗೆರೆ ವರದಿ: ದಾವಣಗೆರೆ ನಗರದ ಹಳೇ ಈದ್ಗಾ ಮೈದಾನ, ರಾಮನಗರದ ಈದ್ಗಾ ಮೈದಾನ, ಶಿವ ನಗರ ಬಳಿ ಇರುವ ಹೊಸ ಈದ್ಗಾ ಮೈದಾನಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಬಳ್ಳಾರಿಯಲ್ಲೂ ಸಂಭ್ರಮದ ರಂಜಾನ್ ಹಬ್ಬಾಚರಿಸಲಾಯಿತು. ನಗರದ ಎಪಿಎಂಸಿ ಬಳಿಯ ಈದ್ಗಾ ಮೈದಾನಕ್ಕೆ ತೆರಳಿದ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

### ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದಲ್ಲಿ ರಂಭಾಪುರಿ ಶ್ರೀಗಳು

# ಅರಿವಿನೆಡೆಗೆ ಕರೆದೊಯ್ಯುವುದೇ ಗುರುವಿನ ಧರ್ಮ

■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಮನುಷ್ಯನಲ್ಲಿ ಅರಿವು-ಮರೆವು ಎರಡೂ ಮನೆ ಮಾಡಿವೆ. ಮರೆವು ದೂರ ಮಾಡಿ ಅರಿವು ಉಂಟು ಮಾಡುವುದೇ ಗುರುವಿನ ನಿಜ ಧರ್ಮವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ವಿದ್ಯಾನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಶ್ರೀ ಪಾರ್ವತಿ ಮಹಿಳಾ ಅಭಿವೃದ್ಧಿ ಮಂಡಳದ 22ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಸುಖ-ದುಃಖಗಳು ಬರುವುದು ಸಹಜ. ಸುಖ ಬಂದಾಗ ಹಿಗ್ಗದೇ ಕಷ್ಟ ಬಂದಾಗ ಕುಗ್ಗದೇ ಸಮತೋಲನದಿಂದ ಬಾಳುವುದು ಜೀವನ



ಶ್ರೇಯಸ್ಸಿಗೆ ಕಾರಣವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಜಾತಿ ಜಂಜಡಗಳನ್ನು ಮೀರಿ ಭಾವ ಸಾಮರಸ್ಯ ಸೌಹಾರ್ದತೆಗಾಗಿ ಸದಾ ಶ್ರಮಿಸಿದವರು. ಸಂಸ್ಕಾರದ ಮೂಲಕ ಉತ್ತುಂಗಕ್ಕೇರಲು ಪೂರಕವಾದ ಜೀವನ ಮೌಲ್ಯ ಸೂತ್ರಗಳನ್ನು ಬೋಧಿಸಿದ್ದಾರೆ ಎಂದರು.

ಸೂಡಿ ಜುಕ್ತಿ ಹಿರೇಮಠದ ಡಾ.ಕೊಟ್ಟೂರ ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸುಖವೇ ಬರಲಿ, ಕಷ್ಟಗಳೇ ಬರಲಿ ಯಾವಾಗಲೂ ಸಮಚಿತ್ತದಿಂದ ಬಾಳುವ ಅವಶ್ಯಕತೆಯಿದೆ. ಜಾತಿ-ಜಾತಿಗಳ ಸಂಘರ್ಷ ಉಂಟು ಮಾಡದೇ ಸಾಮರಸ್ಯ-ಸೌಹಾರ್ದತೆ ಬೆಳೆಸುವ ನಿಟ್ಟಿನಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರಧಾರೆಗಳು ಸರ್ವರಿಗೂ ಆಶಾಕಿರಣವಾಗಿವೆ ಎಂದರು.

ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇವರು, ಧರ್ಮ, ಸಂಸ್ಕೃತಿ ನಮ್ಮೆಲ್ಲರ ನಂಬಿಗೆಯ ಮೇಲೆ ನಿಂತಿವೆ. ನಂಬಿಗೆ ಇದ್ದಲ್ಲಿ ಫಲ ಕಟ್ಟಿಟ್ಟ ಬುತ್ತಿ. ಶ್ರೀ ಜಗದ್ಗುರು ರೇಣುಕಾಚಾರ್ಯರ ದೂರದರ್ಶಿತ್ವದ ತತ್ವ ಸಿದ್ಧಾಂತಗಳನ್ನು ತಿಳಿದು ಆ ದಾರಿಯಲ್ಲಿ ಮುನ್ನಡೆದರೆ ಜೀವನ ಸಾರ್ಥಕಗೊಳ್ಳುತ್ತದೆ ಎಂದರು.

ಪಾರ್ವತಿ ಮಹಿಳಾ ಅಭಿವೃದ್ಧಿ ಮಂಡಳ ಅಧ್ಯಕ್ಷರಾದ ಇಂದುಮತಿ ಮಾನ್ವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಕಾಶ ಬೆಂಡಿಗೇರಿ ಮತ್ತು ವಿಶ್ವನಾಥ ಹಿರೇಗೌಡರ ಉಪಸ್ಥಿತರಿದ್ದರು. ಪ್ರಭಾ ಹಿರೇಮಠ ಮತ್ತು ವಾಣಿಶ್ರೀ ನಿರೂಪಿಸಿದರು.

# ರೈತರ ಅಭಿವೃದ್ಧಿಗೆ ಮೋದಿ ಸರಕಾರ ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಯಕರ್ತರಿಂದಲೇ ಪಕ್ಷ ಎಂದು ಕಾರ್ಯಕರ್ತರೊಂದಿಗೆ ಸಂವಾದ ನಡೆಸಿ ಮೋದಿ ಸರಕಾರ ಹಾಗೂ ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ರೈತ ಪರ ಕಾಳಜಿಯಿಂದ ರೈತ ವಿದ್ಯಾನಿಧಿ ಯೋಜನೆ ಮೂಲಕ ರೈತ ಮಕ್ಕಳು ಶಿಕ್ಷಿತರಾಗಿಲಿ ಎಂಬ ದೂರದೃಷ್ಟಿಯ ಯೋಜನೆ ರೂಪಿಸಿದ್ದರು. ರೈತ ಫಸಲ್ ಭೀಮಾ ಯೋಜನೆ ರೈತರಿಗೆ ಬೆನ್ನೆಲುಬಾಗಿ ನಿಂತಿದೆ. ಹಾಗಾಗಿ ರೈತರ ಉಳಿವಿಗಾಗಿ ಬಿಜೆಪಿ ಹಾವೇರಿ-ಗದಗ ಲೋಕಸಭಾ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರನ್ನು ಗೆಲ್ಲಿಸಬೇಕು ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಹೇಳಿದರು.

ಅವರು ಪಕ್ಷದ ಕಾರ್ಯಾಲಯದಲ್ಲಿ ರೈತ ಮೋರ್ಚಾ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ರೈತರ ಪರ ಸಾಕಷ್ಟು ಯೋಜನೆಗಳನ್ನು ರೂಪಿಸಿದ ಬಿಜೆಪಿ ಸರಕಾರ ಈ ಹಿಂದೆ ಬರಕಾಲ ಬಿದ್ದಾಗ ಪ್ರತಿ ಹೇಕ್ಟರ್‌ಗೆ 25-40 ಸಾವಿರ ರೂಪಾಯಿಗಳ ಬರ ಪರಿಹಾರ ನೀಡಿ ಸಂಕಷ್ಟದಲ್ಲಿ ರೈತರ ಬೆನ್ನಿಗೆ ನಿಂತಿತ್ತು ಎಂದರು.

ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ಮಾತನಾಡಿ, ನರೇಂದ್ರ ಮೋದಿ ಸರಕಾರ ಬರುವ ವರ್ಷಗಳಲ್ಲಿ ಭಾರತವನ್ನು ನಂ.1 ದೇಶವನ್ನಾಗಿ ಮಾಡುವ ಪಣ ತೊಟ್ಟಿದೆ. ಮೋದಿಯವರ ಕೈ ಬಲಪಡಿಸಲು ಬಸವರಾಜ ಬೊಮ್ಮಾಯಿಯವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿ ಎಂದರು.

ಕರ್ನಾಟಕ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷೆ ಭಾರತಿ ಅಳವಂಡಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಬಸವರಾಜ ಇಟಗಿ, ಅಶೋಕ ಕರೂರ, ಎಂ.ಎಂ. ಹಿರೇಮಠ, ರಾಜು ಕುಲಕರ್ಣಿ, ಎಂ.ಎಸ್. ಕರಿಗೌಡರ, ಆರ್.ಕೆ. ಚವ್ಹಾಣ, ವೀರಣ್ಣ ಅಂಗಡಿ, ಪಕ್ಕಿರೇಶ ರಟ್ಟಿಹಳ್ಳಿ, ರಾಜೇಂದ್ರಪ್ರಸಾದ ಹೊನ್ನಗಲ್, ಕೆ.ಪಿ. ಕೋಟಿಗೌಡರ, ವಿನೋದ ಹೌಸನೂರು ಮುಂತಾದವರು ಇದ್ದರು.

## ಸಾವಿರಾರು ಮುಸ್ಲಿಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ, ಶುಭಾಶಯ ವಿನಿಮಯ

# ಸಂಭ್ರಮದ ರಂಜಾನ್ ಹಬ್ಬ ಆಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಗುರುವಾರ ಶ್ರದ್ಧಾಭಕ್ತಿ ಮತ್ತು ಸಂಭ್ರಮದೊಂದಿಗೆ

ಮುಸ್ಲಿಂ ಬಾಂಧವರು ಪವಿತ್ರ ಹಬ್ಬ ಈದ್ ಉಲ್ ಫಿತ್ರ್ (ರಂಜಾನ್ ಹಬ್ಬ)ವನ್ನು ಆಚರಣೆ ಮಾಡಿದರು.

ನರೇಗಲ್ಲ, ಅಬ್ಬಿಗೇರಿ, ಯರೇಬೇಲೇರಿ, ಕುರುಡಗಿ, ಡ.ಸ. ಹಡಗಲಿ, ನಿಡಗುಂದಿ, ಜಕ್ಕಲಿ, ಮಾರನಬಸರಿ, ಗುಜಮಾಗಡಿ, ಹೊಸಳ್ಳಿ, ಹಾಲಕೇರಿ, ಕೋಚಲಾಪೂರ ಮೊದಲಾದ ಕಡೆಗಳಲ್ಲಿ ಹಬ್ಬದ ಖುಷಿ ಮನೆ ಮಾಡಿತ್ತು. ಮುಸ್ಲಿಂ ಬಾಂಧವರು ಹಿಂದೂ ಬಾಂಧವರನ್ನು ತಮ್ಮ ಮನೆಗೆ ಕರೆದು ರಂಜಾನ್ ಹಬ್ಬದ ವಿಶೇಷ ಶೀರ್ ಕೂರ್ಮಾ (ಸುರ್ ಕುಂಬಾ) ಕೊಟ್ಟು, ಊಟ ಮಾಡಿಸಿ, ಭ್ರಾತೃತ್ವ ಮೆರೆದರು.

ನರೇಗಲ್ಲ ಪಟ್ಟಣ ಗದಗ ರಸ್ತೆಯಲ್ಲಿರುವ ಈದ್ಗಾ ಮೈದಾನದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ಮುಸ್ಲಿಂ ಬಾಂಧವರು ಏಕಕಾಲಕ್ಕೆ ಸಾಮೂಹಿಕ ಪ್ರಾರ್ಥನೆ ಮಾಡಿದರು. ದರಗಾದ ಮಂಜೂರ ಹುಸೇನ ಶ್ಯಾವಲಿ ಶರಣರು ಆಶೀರ್ವಚನ ನೀಡಿ, ಪವಿತ್ರ ರಂಜಾನ್ ಒಂದು ತಿಂಗಳ ಉಪವಾಸ ಮಾಡುವ ಮೂಲಕ ನಮ್ಮ ಸಂಬಂಧ ದೇವರ ಜೊತೆ ಮತ್ತಷ್ಟು ಗಟ್ಟಿಯಾಗುತ್ತದೆ. ಈ ತಿಂಗಳಲ್ಲಿ ಉಪವಾಸ ಮಾಡಿದರೆ ಸಂಕಷ್ಟಗಳು ಕಡಿಮೆಯಾಗುತ್ತವೆ. ಈ ತಿಂಗಳಲ್ಲಿ ಬಡವರಿಗೆ ದಾನ-ಧರ್ಮ ಮಾಡುವುದು ಹಾಗೂ ಹಸಿದವರಿಗೆ ಆಹಾರ ನೀಡುವಂಥ ಪುಣ್ಯ ಕಾರ್ಯಗಳನ್ನು ಮಾಡಲಾಗುತ್ತದೆ ಎಂದರು.

ಸಾಮೂಹಿಕ ಪ್ರಾರ್ಥನೆಯಲ್ಲಿ ನರೇಗಲ್ಲ ದರಗಾದ ಮಂಜೂರ್ ಹುಸೇನ್‌ಶಾವಲಿ ಶರಣರು, ನಿವೃತ್ತ ಶಿಕ್ಷಕ ಎ.ಆಯ್. ರಾಹುತ್, ಎ.ಎ. ನವಲಗುಂದ, ಶಿವನಗೌಡ ಪಾಟೀಲ, ಶರಣಪ್ಪ ಬೆಟಗೇರಿ, ಹನುಮಂತ ಅಬ್ಬಿಗೇರಿ, ಕಳಕನಗೌಡ ಪೊಲೀಸ್ ಪಾಟೀಲ, ಶೇಖಪ್ಪ ಕೆಂಗಾರ, ನಿಂಗಪ್ಪ ಲಕ್ಕನಗೌಡ್ರ, ನಜೀರಸಾಬ ಹದ್ಲಿ, ಸಿಕಂದರ ಕುದರ, ದಾವುದಲಿ ಕುದರಿ, ಹಟೇಲಸಾಬ ಲತೀಫಸಾಬನ್ನವರ, ಖಾದರ್‌ಬಾಷಾ ಹೂಲಗೇರಿ, ಖಾದೀರಸಾಬ್ ಬನ್ನಿಗೋಳ, ಪೀರಸಾಬ ರಾಹುತ್, ಅಬ್ದುಲ್‌ಗನಿ ಕುದರಿ, ಗಫಾರ ಬಾಲೇಸಾಬನವರ, ಅಬ್ದುಲ್‌ಸಾಬ ರವಡೂರ, ಪೀರಸಾಬ ನದಾಫ, ರೈಮಾನಸಾಬ ತಹಸೀಲ್ದಾರ, ಹಸನಸಾಬ ಕೊಪ್ಪಳ, ಮೊಹ್ಮದ್ ನಶೇಖಾನ ಅಲ್ಲಾಭಕ್ಷಿ ನದಾಫ, ಅಬ್ದುಲ್‌ರಹಿಮಾನ ನವಲಗುಂದ, ಕೊಪ್ಪದ, ಮಹಬೂಬ ಹೊಸಮನಿ, ರೈಮಾನಸಾಬ ಕುಂದಗೋಳ, ಇಮಾಮಹುಸೇನ ಹಜರತ್, ಕಾಶೀಂಸಾಬ ಹೊಸಮನಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ರಂಜಾನ್ ಹಬ್ಬದ ನಿಮಿತ್ತ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ನರೇಗಲ್ಲ ಪೊಲೀಸ್ ಠಾಣಾ ಸಿಬ್ಬಂದಿ ಮುಂಜಾಗ್ರತಾ ಕ್ರಮವಾಗಿ ಬಿಗಿ ಬಂದೋಬಸ್ತ್ ಮಾಡಿದ್ದರು.



ಈದ್ಗಾದಲ್ಲಿ ವಿಶೇಷ ಪ್ರಾರ್ಥನೆ ಮುಗಿದ ಬಳಿಕ ಮುಸ್ಲಿಂ ಬಾಂಧವರು ಪರಸ್ಪರ ಆಲಂಗಿಸಿ ಹಬ್ಬದ ಶುಭಾಶಯವನ್ನು ವಿನಿಯಮ ಮಾಡಿಕೊಂಡರು. ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಕಳೆದ ಒಂದು ತಿಂಗಳಿಂದ ಉಪವಾಸ ರೋಜಾ ಆಚರಣೆಯನ್ನು ಮುಸ್ಲಿಂ ಬಾಂಧವರು ಅತ್ಯಂತ ಶ್ರದ್ಧಾ ಭಕ್ತಿಗಳಿಂದ ನೆರವೇರಿಸಿಕೊಂಡು ಬಂದಿದ್ದರು. ಹಬ್ಬದ ಮುನ್ನಾ ದಿನವೇ ಅದನ್ನು ಪೂರ್ಣಗೊಳಿಸಿ ಬೆಳಗ್ಗೆ ವಿಶೇಷ ಪ್ರಾರ್ಥನೆ ಸಲ್ಲಿಸುವುದು ವಾಡಿಕೆ. ರಂಜಾನ್ ಹಬ್ಬ ಆಚರಣೆ ಮಾಡುವ ಮೂಲಕ ಇದಕ್ಕೆ ತೆರೆ ಬಿದ್ದಿತು.

## ಬಂಧನ ಪ್ರಶ್ನಿಸಿ ಕೇಜ್ರಿವಾಲ್ ಮೇಲ್ಮನವಿ: ಏಪ್ರಿಲ್ 15 ರಂದು ಸುಪ್ರೀಂ ಕೋರ್ಟ್ ವಿಚಾರಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ರದ್ದಾಗಿರುವ ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ತಮ್ಮ ಬಂಧನ ಮತ್ತು ರಿಮಾಂಡ್ ವಿರುದ್ಧದ ಅರ್ಜಿಯನ್ನು ವಜಾಗೊಳಿಸಿದ ದೆಹಲಿ ಹೈಕೋರ್ಟ್ ಆದೇಶ ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಮೇಲ್ಮನವಿಯನ್ನು ಸುಪ್ರೀಂ ಕೋರ್ಟ್ ಏಪ್ರಿಲ್ 15 ರಂದು ವಿಚಾರಣೆ ನಡೆಸಲಿದೆ.

ಆದಾಗ್ಯೂ, ಕೇಜ್ರಿವಾಲ್ ಅವರ ಮೇಲ್ಮನವಿ ಆಲಿಸುವ ನ್ಯಾಯಾಧೀಶರು ಯಾರು ಎಂದು ಸುಪ್ರೀಂ ಕೋರ್ಟ್ ಇನ್ನೂ ನಿರ್ಧರಿಸಿಲ್ಲ.

ಕಳೆದ ಮಂಗಳವಾರ ದೆಹಲಿ ಹೈಕೋರ್ಟ್, ಬಂಧನ ಪ್ರಶ್ನಿಸಿ ಕೇಜ್ರಿವಾಲ್ ಅವರು ಸಲ್ಲಿಸಿದ್ದ ಅರ್ಜಿಯವನ್ನು ವಜಾಗೊಳಿಸಿತ್ತು. ಒಂದು ದಿನದ ನಂತರ, ಕೇಜ್ರಿವಾಲ್ ಅವರು ಬುಧವಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಅಲ್ಲದೆ ತಮ್ಮ ಮೇಲ್ಮನವಿಯನ್ನು ಆದಷ್ಟು ಬೇಗ ವಿಚಾರಣೆಗೆ ಪಟ್ಟಿ ಮಾಡುವಂತೆ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ್ದರು.

## ಲೋಕಸಭಾ ಚುನಾವಣೆಯ ಕುರಿತು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ವಿವರಣೆ

# ನ್ಯಾಯಸಮ್ಮತ ಚುನಾವಣೆಗೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಬರುವ ಮತಗಟ್ಟೆಗಳು ಹಾಗೂ ಇತರ ವಿವರಗಳನ್ನು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನೀಡಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 961 ಮತಗಟ್ಟೆಗಳಿದ್ದು, ಈ ಪೈಕಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ-251, ಗದಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ-223, ರೋಣ ವಿಧಾನಸಭಾ ವ್ಯಾಪ್ತಿಯಲ್ಲಿ-267 ಹಾಗೂ ನರಗುಂದ ವಿಧಾನಸಭಾ ಮತಕ್ಷೇತ್ರದಲ್ಲಿ-220 ಮತಗಟ್ಟೆಗಳು ಬರುತ್ತವೆ.

ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಖಾತರಿಪಡಿಸಿಕೊಳ್ಳುವುದು, ಮತಗಟ್ಟೆ ಬಗ್ಗೆ ಮಾಹಿತಿ ಪಡೆಯುವುದು ಇತರೆ ಚುನಾವಣೆ ವಿಷಯಗಳಿಗೆ ಸಂಬಂಧಿಸಿದಂತೆ ದೂರು ಸಲ್ಲಿಸಲು/ಮಾಹಿತಿಯನ್ನು ಪಡೆಯಲು ಜಿಲ್ಲಾಧಿಕಾರಿ ಅವರ ಕಚೇರಿಯಲ್ಲಿ ಟೋಲ್ ಫ್ರೀ ಸಂಖ್ಯೆ-1950ಕ್ಕೆ ಕರೆ ಮಾಡಬಹುದಾಗಿದೆ.

ಜಿಲ್ಲೆಯಲ್ಲಿ ಯಾವುದೇ ರೀತಿ ದೂರುಗಳ ನಿರ್ವಹಣೆಗಾಗಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಸೈಯದ್ ಜೋಹೈಬುಲ್ಲಾ(ಮೊ.ನಂ-8277944217) ಇವರನ್ನು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಇವರ ಅಧೀನದಲ್ಲಿ Complaint Monitoring Team, cVIGIL ತಂಡ, 1950 ಕಾಲ್ ಸೆಂಟರ್ ಹಾಗೂ ಜಿಲ್ಲಾ ಕಂಟ್ರೋಲ್ ರೂಂ ಕಾರ್ಯನಿರ್ವಹಿಸುತ್ತವೆ.

ಚುನಾವಣಾ ಆಯೋಗದ ಸೂಚನೆಯಂತೆ ಪ್ರತಿ ಮತಗಟ್ಟೆಗಳಿಗೆ ಒಬ್ಬರು ಅಧ್ಯಕ್ಷಾಧಿಕಾರಿ ಮತ್ತು ಮೂವರು ಮತಗಟ್ಟೆ ಅಧಿಕಾರಿಗಳು ಹಾಗೂ ಮೀಸಲು ಸಿಬ್ಬಂದಿಗಳನ್ನು ನೇಮಕ ಮಾಡಲಾಗುತ್ತದೆ. ಸದರಿ ಅಧಿಕಾರಿಗಳಿಗೆ ಈಗಾಗಲೇ ಮೊದಲನೇ ಹಂತದ ತರಬೇತಿಯನ್ನು ನೀಡಲಾಗಿದೆ. ಕೇಂದ್ರ ಸರ್ಕಾರಿ ಅಧಿಕಾರಿ/ಸಿಬ್ಬಂದಿಗಳನ್ನು ಆಯ್ದ ಮತಗಟ್ಟೆಗಳಿಗೆ ಮೈಕ್ರೋ ವೀಕ್ಷಕರನ್ನಾಗಿ ನೇಮಕ ಮಾಡಲಾಗುತ್ತದೆ.

ಈವರೆಗೆ ಜಿಲ್ಲೆಯಲ್ಲಿ ರೂ.20,47,700 ನಗದನ್ನು ವಶಪಡಿಸಿಕೊಳ್ಳಲಾಗಿದೆ. 3584.955 ಲೀಟರ್ ಮದ್ಯವನ್ನು ವಶಪಡಿಸಿಕೊಳ್ಳಲಾಗಿದ್ದು, ಸದರಿ ಮದ್ಯದ ಮೌಲ್ಯ ರೂ. 20,37,547.33 ಆಗುತ್ತದೆ. ರೂ. 21,404 ಮೌಲ್ಯದ 0.506 ಕೆ.ಜಿ ಡ್ರಗ್ಸ್ ವಶಪಡಿಸಿಕೊಳ್ಳಲಾಗಿದೆ. ರೂ. 1,60,000 ಬೆಲೆಬಾಳುವ 2 ಕೆ.ಜಿ ಬೆಳ್ಳಿಯನ್ನು ವಶಪಡಿಸಿಕೊಳ್ಳಲಾಗಿದ್ದು, ವಶಪಡಿಸಿಕೊಳ್ಳಲಾದ ಇತರೆ ಸಾಮಗ್ರಿಗಳ ಮೌಲ್ಯ ರೂ. 42,350 ಆಗುತ್ತದೆ. ಒಟ್ಟಾರೆಯಾಗಿ ಎಲ್ಲಾ Seizures ಒಟ್ಟು ಮೊತ್ತ ರೂ 43,09,001.33 ಆಗುತ್ತದೆ.

2024ರ ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪ್ರತಿಯೊಬ್ಬ ಮತದಾರರು ಸಹ ಅವರ ಹಕ್ಕನ್ನು ಚಲಾಯಿಸಲು ಅಡೆ-ತಡೆಗಳಾಗದಂತೆ ಎಲ್ಲರೂ ಸಹ ಮತದಾನದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾಡಳಿತದಿಂದ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ. ಭಾರತ ಚುನಾವಣಾ ಆಯೋಗದ ಎಲ್ಲಾ ನಿಯಮಗಳಂತೆ ಕಟ್ಟುನಿಟ್ಟಾಗಿ ಪಾಲಿಸಿ ಚುನಾವಣೆಯನ್ನು ನಡೆಸಲು ಜಿಲ್ಲೆಯ ಎಲ್ಲಾ ಮತದಾರರು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಕಾರ ಕೋರಿದೆ.

ಚುನಾವಣೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ www.eci.nic.in ಮತ್ತು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವೆಬ್‌ಸೈಟ್ www.ceokarnataka.kar.nic.in ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ವೆಬ್‌ಸೈಟ್ www.gadag.nic.in ನಲ್ಲಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಅವರು ತಿಳಿಸಿದ್ದಾರೆ.

# ನಮ್ಮ ಪ್ರಾರ್ಥನೆಯಿಂದ ಸಮೃದ್ಧಿ ಲಭಿಸಲಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿಯೊಬ್ಬ ಮುಸ್ಲಿಂರು ಐದು ಕಡ್ಡಾಯ ಆಚರಣೆಗಳನ್ನು ಮಾಡುವುದು ಮತ್ತು ಎಲ್ಲಾ ಧರ್ಮದವರೊಂದಿಗೂ ಭಾವೈಕ್ಯತೆಯಿಂದ ಇರುವುದು ಕರ್ತವ್ಯವಾಗಿದೆ. ನಮ್ಮೀ ಪ್ರಾರ್ಥನೆಯಿಂದ ಕನ್ನಡ ನಾಡಿನಾದ್ಯಂತ ಉತ್ತಮ ಮಳೆ-ಬೆಳೆ ಆಗುವುದರ ಮೂಲಕ ಸಮೃದ್ಧಿಯಾಗಲಿ ಎಂದು ಧರ್ಮಗುರುಗಳಾದ ಖಾದರಸಾಬ ಮುಲ್ಲಾ ಹೇಳಿದರು.

ಡಂಬಳ ಗ್ರಾಮದಿಂದ ಗದಗ ನಗರಕ್ಕೆ ಹೋಗುವ ರಸ್ತೆ ಪಕ್ಕ ಇರುವ ಈದ್ಗಾ ಮೈದಾನದಲ್ಲಿ ರಂಜಾನ ಹಬ್ಬದ ಪ್ರಯುಕ್ತ ಪ್ರಾರ್ಥನೆ ಸಲ್ಲಿಸಿ ಮಾತನಾಡಿದ ಅವರು, ಪವಿತ್ರ ರಂಜಾನ್ 30 ದಿನಗಳ ಕಠಿಣ ಉಪಾವಾಸ ವ್ರತವನ್ನು ಸಂಪೂರ್ಣವಾಗಿ ಮಾಡಿದ ಭಕ್ತನಿಗೆ ಇಂದು ಅವನ ಪರಿಶ್ರಮದ ಬೆಲೆಯನ್ನು ಪಡೆಯುವಂತಹ ಪವಿತ್ರ ದಿನವಾಗಿದೆ ಎಂದು ಹೇಳಿದರು.

ಅಂಜುಮನ್ ಕಮಿಟಿ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ ರಂಜಾನ್ ತಿಂಗಳ ನಿಮಿತ್ಯ ಮಸೀದಿಗೆ ದೇಣಿಗೆ ನೀಡಿದ ದಾನಿಗಳಿಗೆ ಕೃತಜ್ಞತೆಯನ್ನು ಸಲ್ಲಿಸಿದರು. ಧರ್ಮಗುರು ಖಾದರಸಾಬ ಮುಲ್ಲಾ ಅವರು ಪವಿತ್ರ ನಮಾಜನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಖಾಜಾಹುಸೇನ ಹೋಸಪೇಟಿ, ರಾಯಸಾಬ ದೊಡ್ಡಮನಿ, ರಾಯಸಾಬ ಹೊಂಬಳ, ಅಲ್ಲಿಸಾಬ ಸರಕಾವಾಸ, ಹುಸೇನಸಾಬ ಮೂಲಿಮನಿ, ಬುಡ್ನೆಸಾಬ ಅತ್ತಾರ, ಜಾಕೀರ ಮೂಲಿಮನಿ, ಹುಸೇನಸಾಬ ದೊಡ್ಡಮನಿ, ಬಾಬುಸಾಬ ಸರಕಾವಾಸ, ಬುಡ್ನೆಸಾಬ ಜಲಾಲನವರ, ಬಾಬು ಮೂಲಿಮನಿ, ಎಮ್.ಆರ್. ಆಲೂರ, ಮಹಮ್ಮದರಫೀಕ ಹೋಸಪೇಟಿ, ರಫೀಕಸಾಬ ತಾಂಬೋಟಿ, ಜಂದಿಸಾಬ ಸರಕಾವಾಸ, ರಾಯಸಾಬ ಕಾಸ್ತಾರ, ಹುಸೇನಸಾಬ ಹೋಸಬಾವಿ, ಅಬ್ದುಲ ಮಕಾಂದಾರ, ಅಲ್ಲಾವುದ್ದಿನ್ ಹೊಂಬಳ, ರಜಾಕಸಾಬ ತಾಂಬೋಟಿ, ಮುರ್ತುಜಾ ಮನಿಯಾರ, ದಾವಲಸಾಬ ಸೊರಟೂರ, ಫಿರೋಜಖಾನ ಹೋಸಪೇಟಿ, ಪೀರಸಾಬ ಮಕಾಂದಾರ, ಬಿ.ಕೆ. ಕಾಸ್ತಾರ ಮುಂತಾದವರಿದ್ದರು.

## ಶಿಗ್ಲಿ ಗ್ರಾಮದಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಪರ ಚುನಾವಣಾ ಪ್ರಚಾರ

# ಕಾಂಗ್ರೆಸ್ ಸರ್ಕಾರ ಆಶ್ವಾಸನೆಗಳನ್ನು ಈಡೇರಿಸಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಎಲ್ಲ ವರ್ಗದ ಜನರಿಗೆ, ಸಾಮಾನ್ಯರಿಗೂ ಆದ್ಯತೆ ನೀಡುವ ಮೂಲಕ ಸರ್ವರನ್ನು ಸಮಾನತೆಯಿಂದ ಕಾಣುತ್ತಿದೆ. ಶ್ರೀಮಂತರಿಗೆ ಮಾತ್ರ ಅನುಕೂಲ ಕಲ್ಪಿಸುವದು ಕಾಂಗ್ರೆಸ್ ಪಕ್ಷದ ಸಿದ್ಧಾಂತವಲ್ಲ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಪ್ರತಿಪಾದಿಸಿದರು.

ಅವರು ಸಮೀಪದ ಶಿಗ್ಲಿ ಗ್ರಾಮದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರ ಚುನಾವಣೆ ಪ್ರಚಾರ ಸಭೆಯಲ್ಲಿ ಮಾತನಾಡಿದರು.

ಕಾಂಗ್ರೆಸ್ ಎಲ್ಲ ವರ್ಗಗಳ ಅಭಿವೃದ್ಧಿಗಾಗಿ ಈವರೆಗೆ ಹತ್ತಾರು ಯೋಜನೆಗಳನ್ನು ಜಾರಿಗೆ ತಂದಿದೆ. ರಾಜ್ಯದಲ್ಲಿನ ಸಿ.ಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ ನೇತೃತ್ವದಲ್ಲಿ ಸರಕಾರ ಮತದಾರರಿಗೆ ನೀಡಿದ ಆಶ್ವಾಸನೆಗಳನ್ನು ಈಡೇರಿಸಿ ನುಡಿದಂತೆ ನಡೆದಿದ್ದು, ಗ್ಯಾರಂಟಿ ಯೋಜನೆಗಳು ಸಾಕಷ್ಟು ಕುಟುಂಬಗಳಿಗೆ ಅನೂಕೂಲವಾಗಿವೆ ಎಂದರು.


ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಪಕ್ಷದ ಹಿರಿಯ ಮುಖಂಡರ, ಎಲ್ಲ ಕಾರ್ಯಕರ್ತರ ಆಶೀರ್ವಾದದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಲೋಕಸಭೆಗೆ ಸ್ಪರ್ಧಿಸುತ್ತಿದ್ದೇನೆ. ಪಕ್ಷದ ಗೆಲುವಿಗಾಗಿ ಹಿರಿಯರ ಮಾರ್ಗದರ್ಶನದಲ್ಲಿ ಯುವಕರು ಹಗಲಿರುಳು ಕೆಲಸ ಮಾಡುತ್ತಿದ್ದಾರೆ. ನೀವು ನೀಡುವ ಒಂದೊಂದು ಮತವೂ ವ್ಯರ್ಥವಾಗದಂತೆ ಕೆಲಸ ಮಾಡಿ ನಿಮ್ಮ ಋಣ ತೀರಿಸುತ್ತೇನೆ ಎಂದು ನುಡಿದರು.

ಸಭೆಯ ಅಧ್ಯಕ್ಷತೆಯನ್ನ ದುಂಡವ್ವ ಹಾದಿಮನಿ ವಹಿಸಿದ್ದರು. ವೇದಿಕೆಯಲ್ಲಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಹಿರಿಯ ಮುಖಂಡರಾದ ಎಸ್.ಪಿ. ಬಳಿಗಾರ, ಹುಮಾಯೂನ ಮಾಗಡಿ, ಡಿ.ಕೆ. ಹೊನ್ನಪ್ಪನವರ, ಜಿ.ಆರ್. ಕೊಪ್ಪದ, ರಾಜರತ್ನ ಹುಲಗೂರ, ರಾಮಣ್ಣ ಲಮಾಣಿ(ಶಿಗ್ಲಿ), ವಿ.ಜಿ. ಪಡಗೇರಿ, ರಾಜು ಮಡಿವಾಳರ, ಸೋಮಣ್ಣ ಬೆಟಗೇರಿ, ಕೋಟೆಪ್ಪ ವರ್ದಿ, ಯಲ್ಲಪ್ಪ ತಳವಾರ, ಬಸವರಡ್ಡಿ ಹನುಮರಡ್ಡಿ, ದೇವರರಾಜ ತೋಟದ, ಸಿದ್ರಾಮಣ್ಣ ಗುಂಜಳ, ರಫೀಕ ಕಲಬುರ್ಗಿ, ರಮೇಶ ಬಾಕಿ, ಶಿವಪ್ಪ ಕುರಿತು, ಭಾಗ್ಯಶ್ರೀ ಬಾಬಣ್ಣ, ಸುರೇಶ ಸ್ವಾದಿ, ಸಿದ್ದು ಸ್ವಾಮಿ, ಬಾಬುಸಾಬ ಸುಂಕದ, ರಾಜು ಓಲೇಕಾರ, ಸಂತೋಷ ತಾಂದಳೆ ಸೇರಿದಂತೆ ಅನೇಕರಿದ್ದರು.



ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಂಪೂರ್ಣ ಸಾಲ ಮನ್ನಾ ಮಾಡುವದಾಗಿ ಗ್ಯಾರಂಟಿ ನೀಡಿದೆ. ಅಲ್ಲದೆ, ಮನೆಯ ಯಜಮಾನಿಗೆ ವರ್ಷಕ್ಕೆ 1 ಲಕ್ಷ ರೂ.ಗಳ ಮಹಾಲಕ್ಷ್ಮೀ ಯೋಜನೆ ಸೇರಿದಂತೆ ಅನೇಕ ಗ್ಯಾರಂಟಿಗಳನ್ನು ನೀಡಿದೆ. ಇವುಗಳನ್ನು ಹೇಳಿಕೆ ಕೊಡುವದಲ್ಲ, ರಾಜ್ಯ ಸರಕಾರ ಮಾಡಿದಂತೆ ನೀಡಿದ ಗ್ಯಾರಂಟಿಗಳನ್ನು ಈಡೇರಿಸುವದು ಕಾಂಗ್ರೆಸ್ ಸಿದ್ಧಾಂತವಾಗಿದೆ ಎಂದರಲ್ಲದೆ, ಎಲ್ಲರೂ ಈ ಬಾರಿ ಆಶೀರ್ವಾದ ಮಾಡಿ ಎಂದು ಆನಂದಸ್ವಾಮಿ ಗಡ್ಡದೇವರಮಠ ಮನವಿ ಮಾಡಿದರು.

# ಪಿಯುಸಿ ಉತ್ತಮ ಫಲಿತಾಂಶ


■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ 2023-24ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಭೂಮಿಕಾ ಭೋವಿ 517 (ಶೇ 86.16)ಅಂಕ ಪಡೆದು ಪ್ರಥಮ ಸ್ಥಾನ, ರಾಧಿಕಾ ಕೊಲ್ಲಾರಿ 498 (ಶೇ.83) ಅಂಕ ಪಡೆದು ದ್ವಿತೀಯ ಸ್ಥಾನ, ರೇಣುಕಾ ಗುಡಗೇರಿ 491 (ಶೇ. 81.83) ಅಂಕ ಪಡೆದು ತೃತೀಯ ಸ್ಥಾನ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಪ್ರಾಚಾರ್ಯ ಎ.ಎಂ. ಅಂಗಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ 595 ಅಂಕ ಗಳಿಸಿ ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದ ಲಕ್ಷ್ಮೇಶ್ವರ ತಾಲೂಕಿನ ಆದ್ರಳ್ಳಿ ಗ್ರಾಮದ ಬಡ ವಿದ್ಯಾರ್ಥಿನಿ ರವಿನಾ ಲಮಾಣಿಯವರನ್ನು ಆದ್ರಳ್ಳಿ ಗವಿಸಿದ್ದೇಶ್ವರ ಮಠದ ಶ್ರೀ ಕುಮಾರ ಮಹಾರಾಜ ಶ್ರೀಗಳು ಸನ್ಮಾನಿದರು. ತಾಂಡಾ ಪ್ರದೇಶದ ವಿದ್ಯಾರ್ಥಿನಿಯನ್ನು ಶಾಸಕ ಡಾ. ಚಂದ್ರು ಲಮಾಣಿ, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದ ಗಡ್ಡದೇವರಮಠ ಸೇರಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ವಿದ್ಯಾರ್ಥಿನಿಯ ಮನೆಗೆ ಭೇಟಿ ನೀಡಿ ಸನ್ಮಾನಿಸಿ, ಮುಂದಿನ ಶಿಕ್ಷಣಕ್ಕೆ ಪ್ರೋತ್ಸಾಹ-ಭರವಸೆ ನೀಡಿದ್ದಾರೆ.



## ಪೀಠಾರೋಹಣ ಸಮಾರಂಭದ ಪೂರ್ವಭಾವಿ ಸಭೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಮಹಾಸ್ವಾಮಿಗಳ 6ನೇ ವರ್ಷದ ಪೀಠಾರೋಹಣ ಸಮಾರಂಭದ ಅಂಗವಾಗಿ ಏ.14ರ ಬೆಳಿಗ್ಗೆ 10ಕ್ಕೆ ಪಟ್ಟಣದ ಎಸ್‌ಬಿಐ ಬ್ಯಾಂಕಿನ ಮೇಲಿನ ಎಪಿಎಂಸಿ ವರ್ತಕರ ಸಭಾಭವನದಲ್ಲಿ ಭಕ್ತರ ಮತ್ತು ಸಮಾಜ ಬಾಂಧವರ ಪೂರ್ವಭಾವಿ ಸಭೆ ಜರುಗುವುದು.

ಸಭೆಯ ಸಾನ್ನಿಧ್ಯವನ್ನು ಶ್ರೀ ವಚನಾನಂದ ಮಹಾಸ್ವಾಮಿಗಳು ವಹಿಸುವರು. ಪಟ್ಟಣ ಸೇರಿ ತಾಲೂಕಿನ ಎಲ್ಲ ಗ್ರಾಮಗಳ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಲಹೆ-ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಲಕ್ಷ್ಮೇಶ್ವರ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ತಿಳಿಸಿದ್ದಾರೆ.

## ಅನ್ನದಾತನ ಬದುಕು ಹಸನಾಗಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಮಂಗಳವಾರ ಶ್ರೀಮಠದ ಜಮೀನಿನಲ್ಲಿ ಭೂಮಿಪೂಜಾ ಕಾರ್ಯ ನೆರವೇರಿಸಿ ಕೃಷಿ ಚಟುವಟಿಕೆಗಳಿಗೆ ಚಾಲನೆ ನೀಡಿದರು. ಈ ವೇಳೆ ಶುಭಾಶೀರ್ವಾದ ಸಂದೇಶ ನೀಡಿದ ಶ್ರೀಗಳು, ಈ ವರ್ಷ ಉತ್ತಮ ಮಳೆ-ಬೆಳೆಯಾಗಿ ಜಗತ್ತಿನ ಸಕಲ ಜೀವರಾಶಿಗಳಿಗೆ ಅನ್ನ ನೀಡುವ ಅನ್ನದಾತನ ಬದುಕು ಹಸನಾಗಲಿ. ಕೃಷಿ ನಮ್ಮ ಸಂಸ್ಕೃತಿಯಾಗಿದ್ದು, ಈ ಬಗ್ಗೆ ಯಾರೂ ಕೀಳರಿಮೆ ಮಾಡದೇ ಹೆಮ್ಮೆಯಿಂದ ತೊಡಗಿಸಿಕೊಳ್ಳಬೇಕು. ಭೂಮಿತಾಯಿ ನಂಬಿ ಬದುಕಿದವರಿಗೆ ಎಂದೂ ಕೇಡಾಗದು. ರೈತರು ಸಾವಯವ ಕೃಷಿಯತ್ತ ಚಿತ್ತ ಹರಿಸಬೇಕು. ಈ ಸಂವತ್ಸರವು ಎಲ್ಲ ಬಾಳಲ್ಲಿ ಸುಖ-ಶಾಂತಿ, ನೆಮ್ಮದಿ ತರಲಿ ಎಂದು ಹಾರೈಸಿದರು.

ಯುಗಾದಿ ಪಾಡ್ಯದಂದು ಬೆಳಿಗ್ಗೆ ಎಲ್ಲರೂ ಹೊಸ ಉಡುಗೆ ತೊಟ್ಟು ಶ್ರದ್ಧಾ ಭಕ್ತಿಯಿಂದ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ, ಹಿರಿಯರಿಗೆ ನಮಸ್ಕರಿಸಿ ಬೇವು-ಬೆಲ್ಲ ಹಂಚುವದು, ಅದರಲ್ಲೂ ವಿಶೇಷವಾಗಿ ರೈತ ಸಮುದಾಯ ನಸುಕಿನಲ್ಲಿಯೇ ತಮ್ಮ ಜೀವನಾಡಿ ಎತ್ತುಗಳ ಮೈ ತೊಳೆದು, ಶೃಂಗರಿಸಿಕೊಂಡು ಹೊಲಕ್ಕೆ ತೆರಳಿ ಭೂಮಿತಾಯಿ, ಎತ್ತು ಹಾಗೂ ಕೃಷಿ ಪರಿಕರಗಳಿಗೆ ಪೂಜೆ ಸಲ್ಲಿಸಿ ಕೃಷಿ ಚಟುವಟಿಕೆಗಳಿಗೆ ಸಾಂಕೇತಿಕ ಚಾಲನೆ ನೀಡಿದರು.

ವ್ಯಾಪಾರಸ್ಥರು ಅಂಗಡಿ ಮುಂಗಟ್ಟುಗಳಿಗೆ ಪೂಜೆ ಸಲ್ಲಿಸಿದರು. ಹೊಸ ವರ್ಷದ ದಿನ ಆಭರಣ, ಬಟ್ಟೆ, ಇಲೆಕ್ಟ್ರಾನಿಕ್, ಹೊಸ ವಾಹನ ಖರೀದಿ, ಭೂಮಿಪೂಜೆ ಇತರೆಲ್ಲ ಶುಭ ಕಾರ್ಯಗಳನ್ನು ಕೈಗೊಂಡರು. ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ಊರ ದೇವರ ಜಾತ್ರೆ, ಉತ್ಸವ, ಪೂಜೆಗಳು ನೆರವೇರಿದವು.

### ಲೋಕಸಭಾ ಚುನಾವಣೆ | ಮತದಾರರ ಮಾಹಿತಿ ನೀಡಿದ ಡಿಸಿ ವೈಶಾಲಿ ಎಂ.ಎಲ್

## ಏಪ್ರಿಲ್ 12ರಿಂದ ನಾಮಪತ್ರ ಸಲ್ಲಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಈಗಾಗಲೇ ಘೋಷಣೆಯಾಗಿದ್ದು, ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಆ ದಿಸೆಯಲ್ಲಿ ಹಾವೇರಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಏಪ್ರಿಲ್ 12ರಂದು ಚುನಾವಣೆ ಅಧಿಸೂಚನೆ ಹೊರಡಿಸಲಾಗುತ್ತದೆ. ಅಂದಿನಿಂದಲೇ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದೆ. ಸಂಬಂಧಪಟ್ಟ ಚುನಾವಣಾಧಿಕಾರಿಗಳಾದ 10-ಹಾವೇರಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಹಾವೇರಿ ಹಾಗೂ 3-ಬಾಗಲಕೋಟ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಬಾಗಲಕೋಟ ಇವರು ತಮ್ಮ ಕಾರ್ಯಾಲಯದಲ್ಲಿ ನಾಮಪತ್ರ ಸ್ವೀಕರಿಸುವರು.

ನಾಮಪತ್ರ ಸಲ್ಲಿಸಲು ಏಪ್ರಿಲ್ 19 ಕೊನೆಯ ದಿನವಾಗಿದೆ. ಏಪ್ರಿಲ್ 20ರಂದು ನಾಮಪತ್ರ ಪರಿಶೀಲನೆ ಕಾರ್ಯ ನಡೆಯಲಿದ್ದು, ಏಪ್ರಿಲ್ 22ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಮೇ 7ರಂದು



ಮತದಾನ ನಡೆಯಲಿದ್ದು, ಜೂನ್ 4ರಂದು ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದ್ದಾರೆ.

22.1.2024ರಂದು ಪ್ರಕಟಗೊಂಡ ಅಂತಿಮ ಮತದಾರ ಪಟ್ಟಿಯ ನಂತರ ಈವರೆಗೆ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯಲ್ಲಿ 888816 ಮತದಾರರು ಇದ್ದು, ಇವರಲ್ಲಿ 443291 ಪುರುಷ ಮತದಾರರು ಮತ್ತು 445464 ಮಹಿಳಾ ಮತದಾರರು ಇದ್ದಾರೆ. 61 ಮಂದಿ ಇತರೆ ಮತದಾರರು ಇದ್ದಾರೆ.

65-ಶಿರಹಟ್ಟಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ 229462 ಮತದಾರರು ಇದ್ದು, ಇವರಲ್ಲಿ 114919 ಪುರುಷ ಮತದಾರರು ಮತ್ತು 114530 ಮಹಿಳಾ ಮತದಾರರು, ಇತರೆ 13 ಮಂದಿ ಮತದಾರರು ಇದ್ದಾರೆ.

66-ಗದಗ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಒಟ್ಟು 229081 ಮತದಾರರು ಇದ್ದು, ಇವರಲ್ಲಿ 112988 ಪುರುಷ ಮತದಾರರು, 116075 ಮಹಿಳಾ ಮತದಾರರು, 18 ಮಂದಿ ಇತರೆ ಮತದಾರರು ಇದ್ದಾರೆ.

67-ರೋಣ ವಿಧಾನಸಭಾ ಕ್ಷೇತ್ರದಲ್ಲಿ 238569 ಮತದಾರರು ಇದ್ದು, ಇವರಲ್ಲಿ 118782 ಪುರುಷ

ಗದಗ ಜಿಲ್ಲೆಯಲ್ಲಿ 11983 ವಿಶೇಷ ಚೇತನ ಮತದಾರರು ಇದ್ದಾರೆ. 85 ವರ್ಷ ವಯೋಮಿತಿ ಮೀರಿದ ಹಿರಿಯ ನಾಗರೀಕರು 5749 ಜನ ಇದ್ದಾರೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮಾಹಿತ ನೀಡಿದ್ದಾರೆ.

ಮತದಾದರರು ಮತ್ತು 1,19,764 ಮಹಿಳಾ ಮತದಾರರು ಸೇರಿದಂತೆ 23 ಮಂದಿ ಇತರೆ ಮತದಾರರು ಇದ್ದಾರೆ. ಈ ವಿಧಾನಸಭಾ ಕ್ಷೇತ್ರಗಳು ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಬರಲಿದೆ.

ಬಾಗಲಕೋಟೆ ಲೋಕಸಭಾ ಕ್ಷೇತ್ರಕ್ಕೆ ಒಳಪಡುವ 68-ನರಗುಂದ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಒಟ್ಟು 191704 ಮತದಾರರು ಇದ್ದು, ಇವರಲ್ಲಿ 96602 ಪುರುಷ ಮತದಾರರು ಮತ್ತು 95095 ಮಹಿಳಾ ಮತದಾರರು ಸೇರಿದಂತೆ 7 ಇತರೆ ಮತದಾರರು ಇದ್ದಾರೆ.

ಜಿಲ್ಲೆಯಲ್ಲಿ 1525 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 1,486 ಪುರುಷ ಮತದಾರರು ಹಾಗೂ 39 ಮಹಿಳಾ ಮತದಾರರು ಸೇರಿದ್ದಾರೆ.

ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ 179 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 173 ಪುರುಷ ಮತದಾರರು, 6 ಮಹಿಳಾ ಮತದಾರರು ಇದ್ದಾರೆ. ಗದಗ ವಿಧಾನಸಭಾ ಕ್ಷೇತ್ರದಲ್ಲಿ 222 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 217 ಪುರುಷ ಮತದಾರರು, 5 ಮಂದಿ ಮಹಿಳಾ ಸೇವಾ ಮತದಾರರು ಇದ್ದಾರೆ.

ರೋಣ ವಿಧಾನಸಭಾ ಕ್ಷೇತ್ರದಲ್ಲಿ 478 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 467 ಪುರುಷ ಮತದಾರರು ಹಾಗೂ 11 ಮಹಿಳಾ ಮತದಾರರು ಇದ್ದಾರೆ. ನರಗುಂದ ವಿಧಾನಸಭಾ ಕ್ಷೇತ್ರದಲ್ಲಿ 646 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 629 ಪುರುಷ ಮತದಾರರು, 17 ಮಹಿಳಾ ಮತದಾರರು ಇದ್ದಾರೆ. ಗದಗ ಜಿಲ್ಲಾ ವ್ಯಾಪ್ತಿಯಲ್ಲಿ 26,173 ಯುವ ಮತದಾರರು ಇದ್ದು, 13,698 ಪುರುಷ ಯುವ ಮತದಾರರು ಮತ್ತು 12,474 ಯುವ ಮಹಿಳಾ ಹಾಗೂ 1 ಇತರೆ ಮತದಾರರು ಇದ್ದಾರೆ.

### ಸಿದ್ದೇಶ್ವರ ಜಾತ್ರಾ ಮಹೋತ್ಸವದ ಅನುಭಾವ ಗೋಷ್ಠಿಯಲ್ಲಿ ಡಾ. ಸಿ.ಎಂ. ರಫೀ

## ಸಮಗ್ರ ಕೃಷಿಯಿಂದ ಸ್ವಾವಲಂಬಿ ಬದುಕು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ರೈತರು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳುವುದರಿಂದ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಡಾ. ಸಿ.ಎಂ. ರಫೀ ಹೇಳಿದರು.

ಅವರು ಪಟ್ಟಣದ ಸಿದ್ದೇಶ್ವರ ಜಾತ್ರಾ ಮಹೋತ್ಸವದ ಕಡುಬಿನ ಕಾಳಗ ನಂತರ ಅನುಭಾವ ಗೋಷ್ಠಿ-2ರಲ್ಲಿ ಮಾತನಾಡಿ, ಆಧುನಿಕ ತಂತ್ರಜ್ಞಾನ ಯುಗದಲ್ಲಿ ರೈತರು ಏಕ ಬೆಳೆ ಪದ್ಧತಿಯಿಂದ ಹೊರ ಬಂದು ಅಗತ್ಯ ತಕ್ಕಂತೆ ಮಿಶ್ರ ಬೆಳೆಗಳನ್ನು ಬೆಳೆಯುವುದರ ಜೊತೆಯಲ್ಲಿ ಹೈನುಗಾರಿಕೆ, ಕೋಳಿ, ಕುರಿ ಸಾಕಾಣಿಕೆ, ಮೀನು ಸಾಕಾಣಿಕೆ, ತೋಟಗಾರಿಕಾ ಬೆಳೆಗಳನ್ನು ಬೆಳೆಯುವುದರಿಂದ ಸಾಕಷ್ಟು ಆದಾಯ ಪಡೆಯಬಹುದು. ರೈತರಿಗಾಗಿ ಕೃಷಿ ಇಲಾಖೆಯಿಂದ ಹತ್ತು ಹಲವು ಯೋಜನೆಗಳಿದ್ದು, ಅವುಗಳ ಪ್ರಯೋಜನಗಳನ್ನು ಪಡೆದುಕೊಳ್ಳಬೇಕು ಎಂದರು.

ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ಐತಿಹಾಸಿಕ ದೇವಾಲಯಗಳು ಇಂದು ನಶಿಸಿಹೋಗುತ್ತಿದ್ದು,



ಅವುಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವುದರ ಜೊತೆಯಲ್ಲಿ ಜಾತ್ರೆಗಳನ್ನು ಮಾಡುವ ಮೂಲಕ ಜನರಲ್ಲಿ ಆಧ್ಯಾತ್ಮ ಚಿಂತನ-ಮಂಥನ, ಜ್ಞಾನವನ್ನು ಪ್ರಸಾರ ಮಾಡುವ ಕಾರ್ಯಗಳು ಸಿದ್ದೇಶ್ವರ ಜಾತ್ರಾ ಸಮಿತಿ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಉಡುಪಿಯ ಕಲಾ ಸಿಂಧು ಬಳಗದ ಕಲಾವತಿ ದಯಾನಂದ ಅವರಿಂದ ರಸಮಂಜರಿ ಕಾರ್ಯಕ್ರಮ ಜರುಗಿತು. ವಿಜಯಲಕ್ಷ್ಮೀ ಹಿರೇಮಠರಿಂದ ಸಂಗೀತ ಸೇವೆ ಜರುಗಿತು.ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಅಧ್ಯಕ್ಷತೆಯನ್ನು ಆರ್.ಸಿ. ಕಮಾಜಿ ವಹಿಸಿದ್ದರು.

ಮುಳಗುಂದದಲ್ಲಿ ಜರುಗುವ ಜಾತ್ರೆಗಳು ಕೇವಲ ಮೋಜು-ಮಸ್ತಿ ಮಾಡದೇ, ಬರೀ ಉತ್ತತ್ತಿ, ಕಡುಬಿನ ಕಾಳಗ ಮಾಡದೇ, ನಾಡಿನ ಹೆಸರಾಂತ ಸ್ವಾಮಿಜಿಗಳನ್ನು ಬರಮಾಡಿಕೊಂಡು ಆಧ್ಯಾತ್ಮದ ಅನುಭವಗಳನ್ನು ಉಣಬಡಿಸುತ್ತಿದ್ದು ಜಾತ್ರೆಗಳಿಗೆ ಮೆರುಗು ಬಂದಿದೆ ಎಂದು ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಅಭಿಪ್ರಾಯಪಟ್ಟರು.

ಜಾತ್ರಾ ಸಮಿತಿ ಅಧ್ಯಕ್ಷ ಗಂಗಪ್ಪ ಸುಂಕಾಪೂರ, ಮನ್ಸೂರ ಹಣಗಿ, ಫಕ್ಕೀರಯ್ಯ ಅಮೋಘಿಮಠ, ಅಶೋಕ ಸೊನಗೋಜಿ, ಮಾಹಾಂತಪ್ಪ ಪಲ್ಲೇದ, ಕುಬೇರಪ್ಪ ಗಡಾದ, ಸಂಜಯ ನೀಲಗುಂದ, ಹೊನ್ನಪ್ಪ ನೀಲಗುಂದ, ಅಶೋಕ ಮೆಣಸಿನಕಾಯಿ, ಅಶೋಕ ಹುಣಸಿಮರದ, ಹಜರತ್‌ಅಲಿ ಲಾಡಸಾಬನವರ, ಅನೂಪ ಕೆಂಚನಗೌಡರ, ಬಸವರಾಜ ಹುಣಸಿಮರದ, ಪಿ.ಎಸ್. ಮರಿದೇವರಮಠ, ಎಸ್.ಎಂ. ಉಜ್ಜಣ್ಣವರ, ಬಿ.ವಿ. ಚಕ್ರಸಾಲಿ, ಮಂಜುನಾಥ ಮಟ್ಟಿ ಇದ್ದರು.

## ನಿಮ್ಮಲ್ಲಿರುವ ದುಶ್ಚಟಗಳನ್ನು ತ್ಯಜಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಪ್ರಾ ವ್ ಾ ಣಿ ಕ ತೆ ಂ ು ಬದುಕು ಮುಸ್ಲಿಂರ ಆದ್ಯ ಕರ್ತವ್ಯವಾಗಬೇಕು. ಜೊತೆಗೆ ಶಾಂತಿ-ಸಹಬಾಳ್ವೆಯ ಜೀವನವನ್ನು ಕಟ್ಟಿಕೊಳ್ಳಬೇಕು ಎಂದು ಮೌಲಾನ್ ಮಲೀಕ್ ಹೇಳಿದರು.

ಅವರು ಗುರುವಾರ ಮಾರನಬಸರಿ ಗ್ರಾಮದ ಈದ್ಗಾ ಮೈದಾನದಲ್ಲಿ ಜರುಗಿದ ರಂಜಾನ್ ಹಬ್ಬದ ಸಾಮೂಹಿಕ ಪ್ರಾರ್ಥನೆಯ ನೇತೃತ್ವ ವಹಿಸಿ ಸಂದೇಶ ನೀಡಿದರು.

ಮುಸ್ಲಿಂರಿಗೆ ರಂಜಾನ್ ಅತ್ಯಂತ ಪವಿತ್ರ ಹಬ್ಬವಾಗಿದ್ದು, ತಿಂಗಳಕಾಲ ಉಪವಾಸ ಆಚರಣೆ ಮಾಡುವ ಮೂಲಕ ದೇವನಿಗೆ ವಿಶೇಷ ಪ್ರಾರ್ಥನೆಯನ್ನು



ಸಲ್ಲಿಸಲಾಗುತ್ತದೆ. ಮುಸ್ಲಿಮರು ತಮ್ಮಲ್ಲಿ ಅಡಕವಾಗಿರುವ ದುಶ್ಚಟಗಳನ್ನು ತ್ಯಜಿಸಿ ಸುಂದರ ಜೀವನ ರೂಪಿಸಿಕೊಳ್ಳುವತ್ತ ದಾಪುಗಾಲು ಹಾಕಬೇಕು. ಮುಖ್ಯವಾಗಿ ಮಕ್ಕಳಿಗೆ ಧಾರ್ಮಿಕತೆಯ ಜೊತೆಗೆ ಗುಣಮಟ್ಟದ ಶಿಕ್ಷಣ ಕೊಡಿಸುವಲ್ಲಿ ಮುತುವರ್ಜಿ ವಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸಮಾಜಕ್ಕೆ ಭೂದಾನ ಮಾಡಿದ ಅಲ್ಲಾಸಾಬ ಹುಡೇದ ಹಾಗೂ ಬುಡ್ನೇಸಾಬ ಕಳಕಾಪೂರರವರನ್ನು ಸಮಾಜದ ವತಿಯಿಂದ ಸತ್ಕರಿಸಲಾಯಿತು.

ಕಾಶಿಮಸಾಬ ದೋಟಿಹಾಳ, ನಬಿಸಾಬ ಹುಡೇದ, ಖಾದಿರಸಾಬ ಕಳಕಾಪೂರ, ರೈಮಾನಸಾಬ ಮೋತೆಖಾನ್, ಅಲ್ಲಿಸಾಬ ಸವಡಿ, ಪಕ್ರುಸಾಬ ಹಜರತನವರ, ಮೌಲಾಸಾಬ ಸವಡಿ, ಬಾಬು ಮೋತೆಖಾನ್, ಬಾಬು ಅತ್ತಾರ, ಅಲ್ಲಾಸಾಬ ಮೋತೆಖಾನ್, ಡಿ.ಡಿ. ದೋಟಿಹಾಳ, ರಿಯಾಜ್ ಆಲೂರ, ಮಹ್ಮದ ಸವಡಿ, ಅಬ್ದುಲ್ ಗದಗ, ಹುಸೇನಸಾಬ ಹುಡೇದ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಉಪಸ್ಥಿತರಿದ್ದರು.

## ಧರ್ಮ ಮಾರ್ಗದೊಂದಿಗೆ ಅಲ್ಲಾನ ಕೃಪೆಗೆ ಪಾತ್ರರಾಗೋಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಾಂತಿ-ಸೌಹಾರ್ದತೆಯ ಸಂಕೇತವಾಗಿರುವ ಪವಿತ್ರ ರಂಜಾನ್ ಹಬ್ಬವನ್ನು ಮುಸ್ಲಿಂ ಬಾಂಧವರು ಗುರುವಾರ ಪಟ್ಟಣದ ಮುಕ್ತಿಮಂದಿರ ರಸ್ತೆಯಲ್ಲಿರುವ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಶ್ರದ್ಧೆ, ಭಕ್ತಿ ಮತ್ತು ಸಂಭ್ರಮದಿಂದ ಆಚರಿಸಿದರು.

ಈ ವೇಳೆ ಮೌಲ್ವಿ ಹಾಫೀಜ್ ಮಹ್ಮದ ಶಕೀಲ್ ಮಾತನಾಡಿ, ರಂಜಾನ್ ತಿಂಗಳಲ್ಲಿ ಉಪವಾಸ ಮಾಡುವ ಮೂಲಕ ಅಲ್ಲಾನ ಸ್ಮರಣೆ ಮಾಡುವುದು ಮುಸ್ಲಿಂರ ಪವಿತ್ರ ಕರ್ತವ್ಯಗಳಲ್ಲಿ ಒಂದಾಗಿದೆ. ಧರ್ಮ ಮಾರ್ಗದಲ್ಲಿ ಸಾಗುವ ಮೂಲಕ ಅಲ್ಲಾನ ಕೃಪೆಗೆ ನಾವೆಲ್ಲ ಪಾತ್ರರಾಗೋಣ. ಬಡವರಿಗೆ, ಅಸಹಾಯಕರಿಗೆ, ದೀನರಿಗೆ ದಾನ-ಧರ್ಮ ಕಾರ್ಯ ಮಾಡುವುದು, ಸಕಲರಿಗೆ ಲೇಸನು ಬಯಸುವುದು ಇಸ್ಲಾಂ ಧರ್ಮದ ತತ್ವವಾಗಿದೆ. ದೇವರ ಪ್ರಾರ್ಥನೆ ಮಾಡುವ ಮೂಲಕ ನಮ್ಮಲ್ಲಿನ ಪಾಪ ಕರ್ಮಗಳ ಕೊಳೆಯನ್ನು ತೊಳೆದುಕೊಳ್ಳುವುದು ಅಗತ್ಯವಾಗಿದೆ ಎಂದರು.

ಮುಸ್ಲಿಂ ಸಮಾಜದ ಅನೇಕರು ಬಡವರಿಗೆ ಹಣ, ಧಾನ್ಯ ಬಟ್ಟೆ ಹಣ್ಣು-ಹಂಪಲಗಳನ್ನು ತಮ್ಮ ಯೋಗ್ಯತಾನುಸಾರ ದಾನ ಮಾಡಿ, ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಮನೆಯಲ್ಲಿ ಹಿಂದೂ ಸ್ನೇಹಿತರು, ನೆರೆಯವರೊಂದಿಗೆ ಸೇರಿ ಊಟ ಮಾಡಿದ ಸಂಪ್ರದಾಯವು ಸಹ ಈ ರಂಜಾನ್ ಹಬ್ಬದ ವಿಶೇಷತೆಯಾಗಿ ಕಂಡು ಬಂದಿತು.

ಸಾಮೂಹಿಕ ಪ್ರಾರ್ಥನೆ ವೇಳೆ ಅಂಜುಮನ್ ಸಂಸ್ಥೆಯ ಅಧ್ಯಕ್ಷ ಮುಕ್ತಾರ್‌ಅಹ್ಮದ ಗದಗ, ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ ಕಣಕೆ, ಡಿ.ಜೆ. ಮುಚ್ಚಾಲೆ, ಎಸ್.ಕೆ. ಹವಾಲ್ದಾರ, ಅಬ್ದುಲ್‌ಕರೀಮ್ ಸೂರಣಗಿ, ಅಬ್ದುಲ್‌ಕರೀಮ್ ಕರೀಮ್‌ಖಾನವರ, ಯುನಿಸ್ ಚೌರಿ, ಫಿರ್ದೋಸ ಆಡೂರ, ಜಾಕೀರಹುಸೇನ ಹವಾಲ್ದಾರ, ಮುಸ್ತಾಕ್ ಶಿರಹಟ್ಟಿ ಅಬ್ಜಲ್ ರಿತ್ತಿ ಸಾಧಿಕ ಬಿಜಾಪುರ, ಶಫಿ ಸಿದ್ದಾಪುರ, ಸಿಕಂದರ ನದಾಫ್, ಸರ್ಫರಾಜ ಸೂರಣಗಿ ಸೇರಿ ಅಪಾರ ಮುಸ್ಲಿಂ ಭಾಂಧವರು ಪಾಲ್ಗೊಂಡಿದ್ದರು.

## 'ಕಮಲ' ಬಿಟ್ಟು 'ಕೈ' ಹಿಡಿದ ಯಲ್ಲಾಪುರ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ಪುತ್ರ

■ ವಿಜಯಸಾಕ್ಷಿ ಸುದ್ದಿ, ಶಿರಸಿ(ಉತ್ತರ ಕನ್ನಡ)

ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಮ್ ಹೆಬ್ಬಾರ್ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರ್ಪಡೆಗೊಳ್ಳುತ್ತಾರೆ ಎಂಬ ಸುದ್ದಿಯ ನಡುವೆ ಅವರ ಪುತ್ರ ವಿವೇಕ್ ಹೆಬ್ಬಾರ್ ಹಾಗು ಬೆಂಬಲಿಗರು ಇಂದು ಕಾಂಗ್ರೆಸ್ ಸೇರಿದರು.

ಬಿಜೆಪಿ ಪರ ಪ್ರಚಾರಕ್ಕಿಳಿಯದೇ ಹೆಬ್ಬಾರ್ ಕಾಂಗ್ರೆಸ್ ನಾಯಕರ ಜತೆ ಗುರುತಿಸಿಕೊಂಡರೆ, ಇವರ ಬೆಂಬಲಿಗರು ಹಾಗೂ ಪುತ್ರ ವಿವೇಕ್ ಹೆಬ್ಬಾರ್ ಇಂದು ಬನವಾಸಿಯಲ್ಲಿ ನೂರಾರು ಕಾರ್ಯಕರ್ತರು, ಮುಖಂಡರೊಂದಿಗೆ ಅಧಿಕೃತವಾಗಿ



ಕೈ ಪಕ್ಷ ಸೇರುವ ಮೂಲಕ ಬಿಜೆಪಿಗೆ ಟಕ್ಕರ್ ಕೊಟ್ಟರು.

ಬಿಜೆಪಿ ನಾಯಕರ ತಾರತಮ್ಯ ನೀತಿ, ತಮ್ಮ ಬೆಂಬಲಿಗರಿಗೆ ಸೂಕ್ತ ಸ್ಥಾನಮಾನ ನೀಡದೇ ಇರುವುದಕ್ಕೆ ಕಾರ್ಯಕರ್ತರಿಗೆ ನ್ಯಾಯ ಕೊಡಿಸುವುದಕ್ಕಾಗಿ ಮನೆ ಬಿಟ್ಟು ಹಳೆಯ ಮನೆಗೆ ಬಂದಿರುವುದಾಗಿ ವಿವೇಕ್ ಹೆಬ್ಬಾರ್ ಹೇಳಿದ್ದಾರೆ. ಇನ್ನೊಂದೆಡೆ, ಶಿವರಾಮ್ ಹೆಬ್ಬಾರ್ ತಟಸ್ಥರಾಗಿದ್ದಾರೆ.

ಇನ್ನೊಂದೆಡೆ, ಸಂಸದ ಅನಂತಕುಮಾರ್ ಬಣ ಸಹ ಬಿಜೆಪಿ ಅಭ್ಯರ್ಥಿ ವಿರುದ್ಧ ತೆ-ಊಡೆ ತಟ್ಟಿರುವುದು ಕಾಗೇರಿಗೆ ಹಿನ್ನಡೆ ಆಗುತ್ತಿದೆ.

ವಿವೇಕ್ ಹೆಬ್ಬಾರ್ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡು ಮಾತನಾಡಿದ ಕೆಪಿಸಿಸಿ ಉಪಾಧ್ಯಕ್ಷ ಐವನ್ ಡಿಸೋಜಾ, "ಬಿಜೆಪಿ ಮನೆ ದಿನದಿಂದ ದಿನಕ್ಕೆ ಖಾಲಿ ಆಗುತ್ತಿದೆ.

ಇಂದು ಇಷ್ಟು ದೊಡ್ಡ ಸಂಖ್ಯೆಯಲ್ಲಿ ಕಾರ್ಯಕರ್ತರು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆ ಆಗುತ್ತಿರುವುದನ್ನು ನೋಡಿದ್ರೆ ಬಿಜೆಪಿಯಲ್ಲಿ ಎಲ್ಲವೂ ಸರಿ ಇಲ್ಲ ಎಂಬುವುದು ಸ್ಪಷ್ಟ" ಎಂದರು.

ಶಿವರಾಮ್ ಹೆಬ್ಬಾರ್ ನಮ್ಮ ಪಕ್ಷದ ಸಿದ್ಧಾಂತ ಒಪ್ಪಿ ಬಂದ್ರೆ ನಮ್ಮ ಸ್ವಾಗತವಿದೆ ಎಂದು ಹೇಳುವ ಮೂಲಕ ಮುಂದಿನ ದಿನಗಳಲ್ಲಿ ಶಿವರಾಂ ಹೆಬ್ಬಾರ್ ಕೂಡಾ ಕಾಂಗ್ರೆಸ್‌ಗೆ ಸೇರ್ಪಡೆ ಆಗುತ್ತಾರೆ ಅನ್ನೋ ಸುಳಿವು ನೀಡಿದರು.

## ಸುಕ್ಷೇತ್ರ ಹೆಬ್ಬಾಳದ ಹಾಲಸ್ವಾಮಿಗಳ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಸದ್ಗುರು ವಿಶ್ವಾರಾಧ್ಯ ಹಾ ಲ ಸ್ವಾ ಮಿ ಗ ಳ ವ ರ ು, ಬ್ರಹನ್ಮಠ, ರಾಂಪುರ ಸದ್ಗುರು ವಿಶ್ವಾರಾಧ್ಯ ಹಾಲಸ್ವಾಮಿಗಳು ಇವರುಗಳ ಕೃಪಾಸಂಜಾತರಾದ ಹಿರೇಹಡಗಲಿ ಗುರುಪಾದ್ದೇವರ ಮಠದ ಸಣ್ಣ ಹಾಲಸ್ವಾಮಿಗಳ ಸಂಕಲ್ಪದಂತೆ ಶಿರಹಟ್ಟಿ ತಾಲೂಕು ಸುಕ್ಷೇತ್ರ ಹೆಬ್ಬಾಳ ಗ್ರಾಮದ ಹಾಲಸ್ವಾಮಿಗಳವರ ಜಾತ್ರಾ ಮಹೋತ್ಸವವು ಏಪ್ರಿಲ್ 20ರಿಂದ ಏ.22ರವರೆಗೆ ಮೂರು ದಿನಗಳ ಕಾಲ ಜರುಗಲಿದೆ.

ಮಧ್ಯಾಹ್ನ 12.15ಕ್ಕೆ ಸಾಮೂಹಿಕ ವಿವಾಹ, ಸಾಯಂಕಾಲ 4.30ಕ್ಕೆ ರಥೋತ್ಸವ, ಏ.22ರ ಸಾಯಂಕಾಲ 4.30ಕ್ಕೆ ಅಡ್ಡಪಲ್ಲಕ್ಕಿ ಉತ್ಸವ ಜರುಗಲಿದೆ. ಮೂರು ದಿನಗಳ ಕಾಲ ಆಗಮಿಸುವ ಭಕ್ತರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಂಡಿದೆ.

ಕಾ ಂ ರ್ು ಕ್ರ ವ್ ು ದ ಲ್ಲಿ ಶ್ರೀ ಗಾಳೇಶ್ವರ ಮಠದ ಷ. ಬ್ರ. ಚಿದಾನಂದ ಅವಧೂತ ಮಹಾಸ್ವಾಮಿಗಳು, ಜಡೆಸಿದ್ದೇಶ್ವರ ಮಠದ ಮ.ನಿ.ಪ್ರ ಶಿವಾನಂದ ಮಹಾಸಾ

ಪೂಜ್ಯಶ್ರೀ ವೀರೇಶ್ವರ ದೇವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಈ ಎಲ್ಲ ಕಾರ್ಯಕ್ರಮಕ್ಕೆ ಸದ್ಭಕ್ತರು ಆಗಮಿಸಬೇಕೆಂದು ಗುರುಹಾಲಸ್ವಾಮಿ ಸೇವಾ ಸಮಿತಿಯವರು ಕೋರಿದ್ದಾರೆ. ಸಾಮೂಹಿಕ ವಿವಾಹ ಆಗಲು ಇಚ್ಛಿಸುವವರು ಏ. 14ರ ಒಳಗಾಗಿ ಸರಕಾರದ ನಿಯಮಾವಳಿಗಳ ಅನುಸಾರ ಹೆಸರು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಮೊ-8884060074, 9742031496, 8105008172, 9986985014 ಸಂಪರ್ಕಿಸಲು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka